ಸಂಪುಟ : 10 ಸಂಚಿಕೆ: 234 ಪುಟ : 4+2 ಬೆಲೆ: 3.00 ಬುಧವಾರ ಅಕ್ಟೋಬರ್ 29 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 234 Pages : 4+2 Price : 3.00 Wednesday October 29 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತು ಹಮ್ಮಿಕೊಂಡಿದ್ದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವ ಎಚ್.ಕೆ. ಪಾಟೀಲ

# ಜನರ ಸಮಸ್ಯೆಗಳಿಗೆ ಸ್ಪಂದಿಸಿ, ಶ್ರದ್ಧೆಯಿಂದ ಕೆಲಸ ಮಾಡಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ಬಡಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ಸದುದ್ದೇಶ ಹೊಂದಿದ್ದು, ಈ ಯೋಜನೆಗಳ ಸೌಲಭ್ಯ ವಿತರಣೆಯಲ್ಲಿ ವಿನಾಕಾರಣ ವಿಳಂಬವಾಗಬಾರದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಭವನದಲ್ಲಿ ಗದಗ ತಾಲೂಕು ಮಟ್ಟದ ಗ್ಯಾರಂಟಿ ಯೋಜನಾ ಸಮಿತಿ ಸಭೆಯ ಅಧ್ಯಕ್ಷ ಅಶೋಕ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತು ಮಂಗಳವಾರ ಹಮ್ಮಿಕೊಂಡಿದ್ದ ಪ್ರಗತಿ ಪರಿಶೀಲನಾ ಸಭೆಯ ನೇತೃತ್ವ ವಹಿಸಿ ಅವರು ಮಾತನಾಡಿದರು.

ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಆಡಳಿತ ಕ್ಷೇತ್ರದಲ್ಲಿ ಕ್ರಾಂತಿಕಾರಕ ಬಹುದೊಡ್ಡ ಬದಲಾವಣೆಯಾಗಿದೆ. ಪಂಚ ಗ್ಯಾರಂಟಿ ಯೋಜನೆಗಳು ಬಡಜನರ ಸೇವೆ ಮಾಡಲು ಒದಗಿಸಿದ ಬಹುದೊಡ್ಡ ಅವಕಾಶವಾಗಿದೆ. ಯೋಜನೆಯ ಮಹತ್ವವನ್ನು ಅರ್ಥೈಸಿಕೊಳ್ಳುವುದು ಹಾಗೂ ಅವುಗಳ ಪೂರ್ಣ ಪ್ರಮಾಣದ ಅನುಷ್ಠಾನಕ್ಕಾಗಿ ಇಲಾಖಾಧಿಕಾರಿಗಳು ಜವಾಬ್ದಾರಿಯಿಂದ ಹಾಗೂ ಆಸಕ್ತಿಯಿಂದ ಕಾರ್ಯನಿರ್ವಹಿಸುವುದು ಮುಖ್ಯ. ಜನರ ಸಮಸ್ಯೆಗಳಿಗೆ ಸ್ಪಂದಿಸಿ ಶ್ರದ್ಧೆಯಿಂದ ಕೆಲಸ ಮಾಡಬೇಕು. ಬಡಜನರ ಸೇವೆ ಪವಿತ್ರ ಕೆಲಸವಾಗಿದ್ದು ಯೋಜನೆಗಳ ಸೌಲಭ್ಯಗಳು ನಿಗದಿತ ಅವಧಿಯಲ್ಲಿಯೇ ತಲುಪಿದಾಗ ಅದರ ಸಾರ್ಥಕತೆ ಕಾಣಬಹುದಾಗಿದೆ ಎಂದರು.

ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಮಾತನಾಡುತ್ತಾ, ಪಂಚಗ್ಯಾರಂಟಿ ಯೋಜನೆಗಳ ಸೌಲಭ್ಯ ವಿತರಣೆಯಲ್ಲಿ ಯಾವುದೇ ಸಮಸ್ಯೆಗಳು ಉಂಟಾದರೆ ಪರಿಹಾರ ಕಂಡುಕೊಳ್ಳಬೇಕು. ಈ ನಿಟ್ಟಿನಲ್ಲಿ ಪ್ರತಿನಿಧಿಗಳ ಸಹಕಾರ ಸದಾಕಾಲ ಇರುತ್ತದೆ. ಅರ್ಹ ಫಲಾನುಭವಿಗಳು ಯೋಜನೆಗಳ ಸೌಲಭ್ಯದಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.




ಗೃಹಲಕ್ಷ್ಮೀ ಯೋಜನೆಯಡಿ ಜೂನ್ 2025ರವರೆಗೆ ಗದಗ ತಾಲೂಕಿನಲ್ಲಿ 80911 ಅರ್ಜಿಗಳು ನೋಂದಣಿಯಾಗಿದ್ದು, ಅದರಲ್ಲಿ 80447 ಅರ್ಜಿಗಳಿಗೆ ಮಂಜೂರಾತಿ ದೊರೆತು ಶೇ. 99.42ರಷ್ಟು ಸಾಧನೆಯಾಗಿದೆ.

ಗದಗ ಶಹರದಲ್ಲಿ (ಐಆರ್ಎ) ಸೆಪ್ಟೆಂಬರ್ ಮಾಹೆಯಲ್ಲಿ ರಾಜ್ಯ ಸರ್ಕಾರ ಅನ್ನಭಾಗ್ಯ ಹಂಚಿಕೆ ಯೋಜನೆಯಡಿ ಒಟ್ಟು 33529 ಪಡಿತರ ಕಾರ್ಡ್‌ಗಳಿದ್ದು, 5544.40 ಕ್ವಿಂಟಲ್ ಅಕ್ಕಿ ಹಂಚಿಕೆ ಮಾಡಲಾಗಿದೆ. ಗದಗ ಗ್ರಾಮೀಣ ಭಾಗದಲ್ಲಿ ಒಟ್ಟು 48402 ಪಡಿತರ ಕಾರ್ಡ್‌ಗಳಿದ್ದು, 7498.05 ಕ್ವಿಂಟಲ್ ಅಕ್ಕಿ ಹಂಚಿಕೆ ಮಾಡಲಾಗಿದೆ.

ಗೃಹ ಜ್ಯೋತಿ ಯೋಜನೆಯಡಿ 30-9-2025ರವರೆಗೆ ಗದಗ ಶಹರ ಉಪವಿಭಾಗದಲ್ಲಿ 48708 ಸ್ಥಾವರಗಳು ಅರ್ಹವಾಗಿದ್ದು, 48473 ಸ್ಥಾವರಗಳು ನೋಂದಣಿಯಾಗಿ, ಶೇ.99.52 ಪ್ರಗತಿಯಾಗಿದೆ. ಗದಗ ಗ್ರಾಮೀಣ ಉಪವಿಭಾಗದಲ್ಲಿ 53268 ಸ್ಥಾವರಗಳು ಅರ್ಹವಾಗಿದ್ದು, 53030 ಸ್ಥಾವರಗಳು ನೋಂದಣಿಯಾಗಿ ಶೇ 99.55ರಷ್ಟು ಪ್ರಗತಿಯಾಗಿದೆ.

ಯುವ ನಿಧಿ ಯೋಜನೆಯಡಿ ಜುಲೈ 2025ರಲ್ಲಿ ಅರ್ಹ ಫಲಾನುಭವಿಗಳಿಗೆ 53,79,000 ರೂ. ಹಣವನ್ನು ಡಿಬಿಟಿ ಮೂಲಕ ಜಮಾ ಮಾಡಲಾಗಿದೆ. ಗದಗ ತಾಲೂಕಿನಲ್ಲಿ ಯುವ ನಿಧಿ ಯೋಜನೆಯಡಿಯಲ್ಲಿ ಜುಲೈ 2025ರವರೆಗೆ 2159 ಅಭ್ಯರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ಶಕ್ತಿ ಯೋಜನೆಯಡಿ ಗದಗ ತಾಲೂಕಿನಲ್ಲಿ 3,54,00,000 ಮಹಿಳಾ ಪ್ರಯಾಣಿಕರು ಶಕ್ತಿ ಯೋಜನೆಯ ಲಾಭ ಪಡೆದಿದ್ದಾರೆ ಎಂದು ಸಭೆಗೆ ಮಾಹಿತಿ ಒದಗಿಸಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನಾ ಸಮಿತಿ ಉಪಾಧ್ಯಕ್ಷೆ ನೀಲಮ್ಮ ಬೋಳನವರ, ಸದಸ್ಯರುಗಳಾದ ಈರಣ್ಣ ಹುಣಸಿಕಟ್ಟಿ, ಷರೀಫ್ ಬಿಳೆಯಲಿ, ತಾಲೂಕು ಗ್ಯಾರಂಟಿ ಸದಸ್ಯರುಗಳಾದ ದಯಾನಂದ ಪವಾರ, ಶಂಭು ಕಾಳೆ, ಸಾವಿತ್ರಿ ಹೂಗಾರ, ಸಂಗು ಕೆರಕಲಕಟ್ಟಿ, ಎನ್.ಬಿ. ದೇಸಾಯಿ ಸಂಗಮೇಶ ಹಾದಿಮನಿ, ರಮೇಶ ಹೊನ್ನಿನಾಯ್ಕರ್, ದೇವರೆಡ್ಡಿ ತಿರ್ಲಾಪುರ, ಮಲ್ಲಪ್ಪ ದಂಡಿನ, ಚಿಂಚಲಿ, ಗಣೇಶ ಸಿಂಗ್ ಮಿಟಾಡೆ, ಮಲ್ಲಪ್ಪ ಬಾರಕೇರ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಎಸ್.ಎನ್. ಬಳ್ಳಾರಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೆ ಸೇರಿದಂತೆ ಸಂಬಂಧಿತ ಅಧಿಕಾರಿಗಳು ಹಾಜರಿದ್ದರು.

> ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಪ್ರಾಮಾಣಿಕತೆಯಿರಬೇಕು. ಆಡಳಿತದಲ್ಲಿ ಪಾರದರ್ಶಕತೆ ಅವಶ್ಯವಾಗಿದ್ದು, ಈ ನಿಟ್ಟಿನಲ್ಲಿ ಎಲ್ಲ ಅಧಿಕಾರಿಗಳು ಯೋಜನೆಗಳ ಸೌಲಭ್ಯ ಅರ್ಹರಿಗೆ ಒದಗಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಬೇಕು.
> **– ಡಾ. ಎಚ್.ಕೆ. ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.

> ಗದಗ ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳು ಶೇ 99.5ರಷ್ಟು ಗುರಿ ತಲುಪಿದ್ದು, ಗದಗ ಜಿಲ್ಲೆಯು ಶೇ. 100ರಷ್ಟು ಗುರಿ ಸಾಧಿಸಿ ರಾಜ್ಯದಲ್ಲಿ ಅಗ್ರಸ್ಥಾನ ಪಡೆಯಬೇಕು. ಅಧಿಕಾರಿಗಳು ಈ ನಿಟ್ಟಿನಲ್ಲಿ ಪರಿಣಾಮಕಾರಿಯಾಗಿ ಕೆಲಸ ನಿರ್ವಹಿಸಿ ಯಶಸ್ವಿಗೊಳಿಸಬೇಕೆಂದು ತಿಳಿಸಿದರು.

### ಬಸವೇಶ್ವರ ಮಹಾವಿದ್ಯಾಲಯದಲ್ಲಿ ಪೂಜ್ಯ ಶ್ರೀ ಲಿಂ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ಪುಣ್ಯಸ್ಮರಣೆ

# ಲಿಂ. ಶ್ರೀಗಳು ಮನಸ್ಸು, ಸಮಾಜವನ್ನು ಕಟ್ಟಿದವರು



**■ವಿಜಯಸಾಕ್ಷಿ ಸುದ್ದಿ, ಗದಗ**

ಸ್ಥಳೀಯ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದಲ್ಲಿ ಪೂಜ್ಯ ಲಿಂ. ಡಾ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ಪುಣ್ಯಸ್ಮರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಸಮಾರಂಭವನ್ನು ಖ್ಯಾತ ವಕೀಲರಾದ ರವಿಕಾಂತ ಅಂಗಡಿ ಉದ್ಘಾಟಿಸಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಪೂಜ್ಯ ಶ್ರೀಗಳವರು ಬಸವಾದಿ ಶರಣರ ಆದರ್ಶಗಳನ್ನು, ವಿಚಾರಗಳನ್ನು ಮೈಗೂಡಿಸಿಕೊಂಡು ತಮ್ಮ ನೇರ ನುಡಿಯಿಂದ ಸಮಾಜದ ಅಂಕು-ಡೊಂಕುಗಳನ್ನು ತಿದ್ದುತ್ತಾ ಮನಸ್ಸನ್ನು ಮತ್ತು ಸಮಾಜವನ್ನು ಕಟ್ಟುವಂತಹ ಮಹತ್ತರ ಕಾರ್ಯ ಮಾಡಿದರು. ಕರ್ನಾಟಕದ ಏಕೀಕರಣ ಹಾಗೂ ಗೋಕಾಕ ಚಳುವಳಿಯ ಮಂಚೂಣಿಯಲ್ಲಿ ನಿಂತು ಕನ್ನಡ ಭಾಷೆ, ನೆಲ, ಜಲಗಳ ರಕ್ಷಣೆ ಮಾಡಿದರು. 600ಕ್ಕೂ ಹೆಚ್ಚು ಪುಸ್ತಕಗಳನ್ನು ಪ್ರಕಟಿಸಿ ಜನರ ಬೌದ್ಧಿಕ ವಿಕಾಸದಲ್ಲಿ ವೈಚಾರಿಕತೆಯನ್ನು ಬೆಳೆಸಿದರು. ಶಿಕ್ಷಣ ಪ್ರೇಮಿಗಳಾದ ಪೂಜ್ಯ ಶ್ರೀಗಳು ನಾಡಿನ ಎಲ್ಲ ಪ್ರದೇಶಗಳಲ್ಲಿ ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸಿ ಅನೇಕ ಬಡ ಮತ್ತು ಹಿಂದುಳಿದ ಜನಾಂಗದವರಿಗೆ ಶಿಕ್ಷಣ ಸಿಗುವಂತೆ ಮಾಡಿದರು ಎಂದರು.

ವೇದಿಕೆಯ ಮೇಲೆ ಅತಿಥಿಗಳಾಗಿ ಉಪಸ್ಥಿತರಿದ್ದ ಸ್ಥಾನಿಕ ಆಡಳಿತ ಮಂಡಳಿಯ ಸದಸ್ಯರಾದ ಅಮರೇಶ ಅಂಗಡಿ, ಸಿದ್ಧಲಿಂಗಯ್ಯ ಹಿರೇಮಠ, ವಿದ್ಯಾಧರ ದೊಡ್ಡಮನಿ ಮಾತನಾಡಿ, ಪೂಜ್ಯ ಶ್ರೀಗಳ ಮಾತೃತ್ವ ಗುಣ, ಸಾಮಾಜಿಕ ಕಳಕಳಿಯ ಬದ್ಧತೆ ಹಾಗೂ ಮಾನವೀಯ ಮೌಲ್ಯಗಳನ್ನು ಯುವಜನಾಂಗವು ಬೆಳೆಸಿಕೊಳ್ಳಬೇಕೆಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶೇಖಣ್ಣ ಕಳಸಾಪೂರಶೆಟ್ಟರ ಮಾತನಾಡಿ, ಪೂಜ್ಯ ಶ್ರೀಗಳ ನಡೆ, ನುಡಿ, ಸಿದ್ಧಾಂತ ಒಂದೇ ಇತ್ತು. ಪೂಜ್ಯರು ಎಲ್ಲರ ಬಗ್ಗೆ ಅಂತಃಕರಣ, ಮಾನವೀಯತೆ ಹಾಗೂ ಸಮಾನತೆಯ ಮನೋಭಾವನೆ ಹೊಂದಿದ್ದರು ಎಂದು ಶ್ರೀಗಳ ಆದರ್ಶಗಳನ್ನು ಸ್ಮರಿಸಿದರು.

ಮಂಜುಶ್ರೀ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಪ್ರಾ. ಎಂ.ಎಂ. ಬುರಡಿ ಸ್ವಾಗತಿಸಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪ್ರೊ. ಶ್ವೇತಾ ಸಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

> ಕಪ್ಪತ್ತಗುಡ್ಡವನ್ನು ರಕ್ಷಣೆ ಮಾಡಿ ಪರಿಸರ ಕಾಳಜಿ ತೆ-ೋರಿದರು. ಕೃಷಿ ಬಗ್ಗೆ ಮತ್ತು ರೈತರ ಬಗ್ಗೆ ಅಪಾರ ಕಾಳಜಿ ಹೊಂದಿದ್ದ ಪೂಜ್ಯರು ಸ್ವತಃ ತಾವೇ ಕೃಷಿ ಮಾಡಿ ರೈತರಿಗೆ ಮಾದರಿಯಾದರು. ಪೂಜ್ಯ ಶ್ರೀಗಳು ಕಷ್ಟದಲ್ಲಿದ್ದವರಿಗೆ ಸಹಾಯ ಮಾಡುತ್ತಾ ಮಾತೃ ಹೃದಯಿಯಾಗಿದ್ದರು. ಅವರ ಆದರ್ಶಗಳನ್ನು ಎಲ್ಲ ವಿದ್ಯಾರ್ಥಿಗಳು ಪಾಲಿಸುತ್ತಾ ಉತ್ತಮ ವ್ಯಕ್ತಿಗಳಾಗಬೇಕೆಂದು ರವಿಕಾಂತ ಅಂಗಡಿ ಹೇಳಿದರು.

# ಸಿ.ಸಿ ರಸ್ತೆ ನಿರ್ಮಾಣಕ್ಕೆ ಸಚಿವರಿಂದ ಚಾಲನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ವಾರ್ಡ್ ನಂ. 35ರಲ್ಲಿ ನೀಲಮ್ಮ ತಾಯಿ ಮಠದ ಹತ್ತಿರ ಸಿ.ಸಿ ರಸ್ತೆ ಕಾಮಗಾರಿಯ ಭೂಮಿಪೂಜೆಯನ್ನು ಮಂಗಳವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ನೆರವೇರಿಸಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ನಗರಸಭಾ ಸದಸ್ಯರು ಉಪಸ್ಥಿತರಿದ್ದರು.

# ಅಭಿವೃದ್ಧಿ ಕಾಮಗಾರಿಗೆ ಸಚಿವರಿಂದ ಭೂಮಿಪೂಜೆ




**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿಯ ವಾರ್ಡ್ ನಂ. 15ರಲ್ಲಿ ಪಂಚಮೂರ್ತಿ ಹಾಗೂ ನವಗ್ರಹ ಉದ್ಯಾನವನದ ಅಭಿವೃದ್ಧಿ ಕಾಮಗಾರಿಯ ಭೂಮಿಪೂಜೆಯನ್ನು ಮಂಗಳವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ನೆರವೇರಿಸಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ನಗರಸಭಾ ಸದಸ್ಯರು, ಗಣ್ಯರು, ಹಿರಿಯರು ಉಪಸ್ಥಿತರಿದ್ದರು.

# ಕಾಮಗಾರಿಗೆ ಸಚಿವರಿಂದ ಭೂಮಿಪೂಜೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ಗದಗ ನಗರದ ವಿವಿಧ ಭಾಗಗಳಲ್ಲಿ ಹೈಮಾಸ್ಟ್ ದೀಪ ಅಳವಡಿಸುವ ಕಾಮಗಾರಿಗೆ ಮಂಗಳವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಜಾಮಿಯಾ ಮಸ್ಜಿದ್ (ಮರ್ಕಜ್) ಹತ್ತಿರದ ಪಟೇಲ್ ರಸ್ತೆಯ ಬಳಿ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ನಗರಸಭಾ ಸದಸ್ಯರು, ಗಣ್ಯರು, ಹಿರಿಯರು ಉಪಸ್ಥಿತರಿದ್ದರು.



# ಅಂಗನವಾಡಿ ಕೇಂದ್ರದ ಉದ್ಘಾಟನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾಧಿಕಾರಿಗಳ ಕಾರ್ಯಾಲಯ ಗದಗ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ 2023-2024ನೇ ಸಾಲಿನ ಮಹತ್ವಾಕಾಂಕ್ಷಿ ತಾಲೂಕು (ನಗರ) ಯೋಜನೇಯಡಿ ನೂತನ ಅಂಗನವಾಡಿ ಕೇಂದ್ರ ಸಂಖ್ಯೆ 256ರ ಕಟ್ಟಡವನ್ನು ವಾರ್ಡ್ ನಂ. 34ರ ನಂದೀಶ್ವರ ನಗರದಲ್ಲಿ ಮಂಗಳವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ▶▶3ನೇ ಪುಟಕ್ಕೆ



## ಎರಡು ರಾಜ್ಯಗಳಲ್ಲಿ ಮತದಾರರಾಗಿ ನೋಂದಣಿ: ಪ್ರಶಾಂತ್ ಕಿಶೋರ್‌ಗೆ ಚುನಾವಣಾ ಆಯೋಗದಿಂದ ನೋಟಿಸ್



■ವಿಜಯಸಾಕ್ಷಿ ಸುದ್ದಿ, ಬಿಹಾರ

ಬಿಹಾರ ಮತ್ತು ಪಶ್ಚಿಮ ಬಂಗಾಳ ಎರಡರಲ್ಲೂ ಮತದಾರರಾಗಿ ನೋಂದಣಿ ಮಾಡಿಕೊಂಡಿದ್ದಕ್ಕಾಗಿ ಜನ ಸುರಾಜ್ ಪಕ್ಷದ ಸಂಸ್ಥಾಪಕ ಪ್ರಶಾಂತ್ ಕಿಶೋರ್ ಅವರಿಗೆ ಮಂಗಳವಾರ ಚುನಾವಣಾ ಆಯೋಗ (ಇಸಿಐ) ನೋಟಿಸ್ ಜಾರಿ ಮಾಡಿದೆ.

ಪಶ್ಚಿಮ ಬಂಗಾಳ ಮತ್ತು ಬಿಹಾರದ ಮತದಾರರ ಪಟ್ಟಿಯಲ್ಲಿ ಪ್ರಶಾಂತ್ ಕಿಶೋರ್ ಅವರ ಹೆಸರು ಕಾಣಿಸಿಕೊಂಡಿದೆ. ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸುತ್ತಿರುವ ಚುನಾವಣಾ ತಂತ್ರಜ್ಞ-ರಾಜಕಾರಣಿಯಾಗಿ ಬದಲಾದ ಅವರ ಹೆಸರು ಕೋಲ್ಕತ್ತಾದ 121 ಕಾಲಿಘಾಟ್ ರಸ್ತೆಯಲ್ಲಿದೆ, ಇದು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ ಭಬಾನಿಪುರ ಕ್ಷೇತ್ರದ ತೃಣಮೂಲ ಕಾಂಗ್ರೆಸ್ ಕಚೇರಿಯ ವಿಳಾಸವಾಗಿದೆ.

ಈ ವರದಿಯನ್ನು ಉಲ್ಲೇಖಿಸಿ, ಚುನಾವಣಾ ಆಯೋಗವು ತನ್ನ ನೋಟಿಸ್‌ನಲ್ಲಿ ಕಿಶೋರ್ ಅವರ ಹೆಸರನ್ನು 'ನಿರ್ಮಲ್ ಹೃದಯ ಶಾಲೆ, ಬೀಡನ್ ಸ್ಟ್ರೀಟ್, ಕೋಲ್ಕತ್ತಾ'ದ ಮತದಾರರ ಪಟ್ಟಿಯಲ್ಲಿ ಮತ್ತು ಬಿಹಾರದ 209 ಕರಹಗರ್ ವಿಧಾನಸಭಾ ಕ್ಷೇತ್ರದಲ್ಲಿ ನೋಂದಾಯಿಸಲಾಗಿದೆ ಎಂದು ತಿಳಿಸಿದೆ.

ಜನತಾ ಪ್ರಾತಿನಿಧ್ಯ ಕಾಯ್ದೆ, 1950 ರ ಸೆಕ್ಷನ್ 17 ರ ಅಡಿಯಲ್ಲಿ, ಒಬ್ಬ ವ್ಯಕ್ತಿಯನ್ನು ಒಂದಕ್ಕಿಂತ ಹೆಚ್ಚು ಕ್ಷೇತ್ರಗಳಲ್ಲಿ ಮತದಾರರಾಗಿ ನೋಂದಾಯಿಸಲು ಸಾಧ್ಯವಿಲ್ಲ ಎಂದು ಚುನಾವಣಾ ಆಯೋಗ ನೆನಪಿಸಿದೆ.

### ಅರ್ಹ ಬಿಪಿಎಲ್ ಕಾರ್ಡ್‌ಗಳನ್ನು ರದ್ದುಗೊಳಿಸಿರುವ ಆಹಾರ ಇಲಾಖೆ ಅಧಿಕಾರಿಗಳ ಅಮಾನತಿಗೆ ಆಗ್ರಹ

## ರದ್ದುಗೊಂಡಿರುವ ಕಾರ್ಡ್‌ಗಳ ಮರು ಪರಿಶೀಲನೆ ಮಾಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರದ ಬಡವರ, ಕೂಲಿಕಾರ್ಮಿಕರ ಹಾಗೂ ಸ್ಲಂ ಜನರ ಬಿಪಿಎಲ್ ಕಾರ್ಡ್‌ಗಳನ್ನು ರದ್ದುಗೊಳಿಸಿರುವ ಆಹಾರ ಇಲಾಖೆ ಅಧಿಕಾರಿಗಳ ಜನವಿರೋಧಿ ಕ್ರಮವನ್ನು ಖಂಡಿಸಿ, ವಿನಾಕಾರಣ ಅರ್ಹ ಫಲಾನುಭವಿಗಳ ಸಾವಿರಾರು ಕಾರ್ಡ್‌ಗಳನ್ನು ರದ್ದುಗೊಳಿಸಿರುವ ಆಹಾರ ಇಲಾಖೆಯ ಸಹಾಯಕ ನಿರ್ದೇಶಕರನ್ನು ಕೂಡಲೇ ಅಮಾನತು ಮಾಡಬೇಕೆಂದು ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಆಗ್ರಹಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್. ಮಾನ್ವಿ ಮಾತನಾಡಿ, ಗದಗ ಆಹಾರ ಇಲಾಖೆ ಅಧಿಕಾರಿಗಳು ಏಕಾಏಕಿ ಸಾವಿರಾರು ಕುಟುಂಬಗಳ ಬಿಪಿಎಲ್ ಪಡಿತರ ಚೀಟಿಗಳನ್ನು ರದ್ದುಗೊಳಿಸಿದ್ದರಿಂದ ಬಡವರು ಪಡಿತರ ಆಹಾರ ಧಾನ್ಯಗಳು ಪರಿತಪಿಸುವಂತಾಗಿದೆ. ಉಳ್ಳವರ ಪಡಿತರ ಚೀಟಿಗಳನ್ನು ಅಧಿಕಾರಿಗಳು ಪತ್ತೆ ಹಚ್ಚಿ ರದ್ದುಗೊಳಿಸಲಿ. ಆದರೆ, ಅಧಿಕಾರಿಗಳು ಯಾವುದೇ ಸಮೀಕ್ಷೆಯನ್ನು ನಡೆಸದೇ, ಮುಂಚಿತವಾಗಿ ಫಲಾನುಭವಿಗಳಿಗೆ ನೋಟಿಸ್ ನೀಡದೇ, ಪಡಿತರ ಅಂಗಡಿಗಳ ಮುಂದೆ ಮಾಹಿತಿಯನ್ನು ಹಚ್ಚದೇ ಏಕಾಏಕಿಯಾಗಿ ಕಾರ್ಡ್ ರದ್ದುಗೊಳಿಸಿರುವುದು ಖಂಡನೀಯ ಎಂದರು.



> ಕೂಡಲೇ ಇದಕ್ಕೆ ಕಾರಣರಾಗಿರುವ ಆಹಾರ ಇಲಾಖೆ ಅಧಿಕಾರಿಗಳ ಮೇಲೆ ಕ್ರಮ ಕೈಗೊಂಡು ಬಡವರ ವಿರೋಧಿ ಅಧಿಕಾರಿಗಳನ್ನು ತಕ್ಷಣ ಅಮಾನತು ಮಾಡಬೇಕು, ಈಗ ರದ್ದುಗೊಂಡಿರುವ ಕಾರ್ಡ್‌ಗಳನ್ನು ಮರು ಪರಿಶೀಲನೆ ನಡೆಸುವರೆಗೊ ಅನ್ಯಾಯಕ್ಕೆ ಒಳಗಾಗಿರುವ ಬಡ ಕುಟುಂಬಗಳಿಗೆ ಆಹಾರ ಧಾನ್ಯಗಳನ್ನು ವಿತರಣೆ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಇಮ್ತಿಯಾಜ್ ಮಾನ್ವಿ ವಿನಂತಿಸಿದರು.

ಆಹಾರ ಇಲಾಖೆ ಅಧಿಕಾರಿಗಳ ಯಡವಟ್ಟಿನಿಂದ ಸಾವಿರಾರು ಬಡ ಕುಟುಂಬಗಳಿಗೆ ಒಂದು ಹೊತ್ತು ಅನ್ನಕ್ಕೂ ಇಲ್ಲದೇ ಉಪವಾಸ ಬಿಳುವ ಸ್ಥಿತಿ ನಿರ್ಮಾಣವಾಗಿದೆ.

ಕೇಂದ್ರ ಸರ್ಕಾರದ ಪಡಿತರ ಚೀಟಿಗಳ ರದ್ದುಗೊಳಿಸಲು ಬಂದಿರುವ ಮಾರ್ಗಸೂಚಿಯನ್ನು ಮರು ಪರಿಶೀಲಿಸಲು ಹೇಳಿದ್ದೇವೆ ಎಂದು ಮುಖ್ಯಮಂತ್ರಿಗಳು ಹೇಳಿಕೆ ನೀಡಿದ್ದಾರೆ. ಆದರೆ ಗದಗ ಆಹಾರ ಇಲಾಖೆ ಅಧಿಕಾರಿಗಳು ರಾಜ್ಯ ಸರ್ಕಾರದ ಸೂಚನೆಯನ್ನು ಸರಿಯಾಗಿ ತಿಳಿದುಕೊಳ್ಳದೇ ತಮ್ಮ ಮನಬಂದಂತೆ ಏಕಾಏಕಿಯಾಗಿ ಸಾವಿರಾರು ಕಾರ್ಡ್‌ಗಳನ್ನು ರದ್ದುಗೊಳಿಸಿ ಬಡ ಕುಟುಂಬಗಳನ್ನು ಬೀದಿಗೆ ತಂದಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಮುಖಂಡರಾದ ಮೌಲಾಸಾಬ ಗಚ್ಚಿ, ಇಬ್ರಾಹಿಂ ಮುಲ್ಲಾ, ಶರಣಪ್ಪ ಸೂಡಿ, ಮೆಹಬೂಬಸಾಬ ಬಳ್ಳಾರಿ, ಸಲೀಂ ಹರಿಹರ, ಶೇಖಪ್ಪ ರೋಣ, ಖಾಜಾಸಾಬ ಇಸ್ಮಾಯಿಲನವರ, ಗೌಸಸಾಬ ಅಕ್ಕಿ, ಮೆಹಬೂಬ ಮುಲ್ಲಾ, ಬಸವರಾಜ ಕಳಸದ, ರಿಜ್ವಾನ ಮುಲ್ಲಾ, ಮಕ್ತುಮಸಾಬ ಮುಲ್ಲಾನವರ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ರಾಜ್ಯದ ಪೊಲೀಸ್ ಸಿಬ್ಬಂದಿಗೆ ಹೊಸ 'ಬ್ಲೂ ಪೀಕ್ ಕ್ಯಾಪ್' ವಿತರಣೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದ ಪೊಲೀಸ್ ಹೆಡ್ ಕಾನ್‌ಸ್ಟೆಬಲ್‌ಗಳು (ಹೆಚ್‌ಪಿಸಿ) ಕಾನ್‌ಸ್ಟೆಬಲ್‌ಗಳು (ಪಿಸಿ) ಧರಿಸುತ್ತಿರುವ ಸ್ಲೋಚ್ ಹ್ಯಾಟ್ (ಟೋಪಿ) ಬದಲಾಗಿ 'ನೇವಿ ಬ್ಲೂ ಪೀಕ್ ಕ್ಯಾಪ್' ಅನ್ನು ವಿತರಿಸುವ ಕಾರ್ಯಕ್ರಮಕ್ಕೆ ಇಂದು (ಅ.28) ಅಧಿಕೃತವಾಗಿ ಚಾಲನೆ ನೀಡಲಾಗಿದೆ.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಗೃಹ ಸಚಿವ ಡಾ.ಜಿ ಪರಮೇಶ್ವರ್ ಅವರು ಪೊಲೀಸ್ ಸಿಬ್ಬಂದಿಗೆ ಸಾಂಕೇತಿಕವಾಗಿ ನೀಲಿ ಬಣ್ಣದ ಪೀಕ್ ಕ್ಯಾಪ್ ವಿತರಿಸಿದರು.

ಬಳಿಕ ಮಾತನಾಡಿದ ಸಿಎಂ ಸಿದ್ದಾರಾಮಯ್ಯ, "ಇಂದು ಬಿಡುಗಡೆ ಮಾಡಿದ ಪೀಕ್ ಕ್ಯಾಪ್ ಮಾದರಿಯನ್ನು ಆಯ್ಕೆ ಮಾಡಿದ್ದು ನಾನೇ. 1956ರಿಂದ, ಅಂದರೆ ಸುಮಾರು 70 ವರ್ಷಗಳಿಂದ ಇದ್ದ ಒಂದೇ ಮಾದರಿಯ ಕ್ಯಾಪ್ ಅನ್ನು ಇಂದು ಬದಲಾಯಿಸಿದ್ದೇವೆ. ಅಧಿಕಾರಿ ಮತ್ತು ಸಿಬ್ಬಂದಿಗೆ ಒಂದೇ ಮಾದರಿ ಕ್ಯಾಪ್ ಒದಗಿಸಲಾಗಿದ್ದು ಇದರಿಂದ ಪೊಲೀಸ್ ಸಿಬ್ಬಂದಿಯ ಆತ್ಮ ವಿಶ್ವಾಸ ಹೆಚ್ಚಾಗಲಿ ಎಂದು ಹೇಳಿದರು. ಕೇವಲ ಕ್ಯಾಪ್ ಬದಲಾಗುವುದಲ್ಲ. ನಿಮ್ಮ ಕಾರ್ಯಕ್ಷಮತೆಯೂ ಬದಲಾಗಲಿ ಎಂದು ಪೊಲೀಸರಿಗೆ ಕರೆ ನೀಡಿದರು.



ಪೊಲೀಸ್ ಇಲಾಖೆಯ ದಕ್ಷತೆಯಿಂದ ಸರ್ಕಾರಕ್ಕೆ ಒಳ್ಳೆ ಹೆಸರು ಬರುತ್ತದೆ. ಇಂಡಿಯಾ ಜಸ್ಟೀಸ್ ವರದಿಯಲ್ಲಿ ಕರ್ನಾಟಕ ಪೊಲೀಸ್ ನಂಬರ್ ಒನ್ ಸ್ಥಾನದಲ್ಲಿದೆ ಎನ್ನುವ ವರದಿ ರಾಜ್ಯದ ಘನತೆ ಹೆಚ್ಚಿಸಿದೆ ಎಂದು ಸಿಎಂ ಮೆಚ್ಚುಗೆ ವ್ಯಕ್ತಪಡಿಸಿದರು.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋಮು ಘರ್ಷಣೆ, ಅನೈತಿಕ ಪೊಲೀಸ್ ಗಿರಿ ಹೆಚ್ಚಾಗಿತ್ತು. ಈ ಹಿಂದಿನ ಅಧಿಕಾರಿಗಳು ನಿಯಂತ್ರಣ ಮಾಡಿರಲಿಲ್ಲ. ನಾನು ಇಬ್ಬರು ಅಧಿಕಾರಿಗಳನ್ನು ಬದಲಾಯಿಸಿ ಆದೇಶ ಹೊರಡಿಸಿದೆ. ಈಗ ದಕ್ಷಿಣ ಕನ್ನಡ ಜಿಲ್ಲೆ ನಿಯಂತ್ರಣದಲ್ಲಿದೆ. ಈ ಸಾಧನೆ ಮಾಡಿದ್ದೂ ನಮ್ಮದೇ ಅಧಿಕಾರಿಗಳು ಮತ್ತು ಸಿಬ್ಬಂದಿ. ಇವರೇನು ಬೇರೆ ಗ್ರಹದಿಂದ ಬಂದವರಲ್ಲ, ನಮ್ಮವರೇ ಆಗಿದ್ದಾರೆ. ಆದ್ದರಿಂದ ನೀವು ಮನಸ್ಸು ಮಾಡಿದರೆ ಎಲ್ಲವೂ ಸಾಧ್ಯವಿದೆ. ಸಾಧಿಸಿ ತೋರಿಸಿ ಎಂದು ಪೊಲೀಸರಿಗೆ ಹೇಳಿದರು.

## ಗದಗ ಜಿಲ್ಲಾ ಚೇಂಬರ್ ಪದಾಧಿಕಾರಿಗಳಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 2025-2026ನೇ ಸಾಲಿನ ನೂತನ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಶರಣಬಸಪ್ಪ ಸಂಗಪ್ಪ ಗುಡಿಮನಿ, ಗೌರವ ಕಾರ್ಯದರ್ಶಿಯಾಗಿ ಅಧಿಕಾರ ವಹಿಸಿಕೊಂಡಿರುವ ಚನ್ನವೀರಪ್ಪ ಪ್ರಭಣ್ಣ ಹುಣಸಿಕಟ್ಟಿ, ಉಪಾಧ್ಯಕ್ಷ ಜಯದೇವ ಎಂ.ಮೆಣಸಗಿ, ಪ್ರಕಾಶ ಎಸ್.ಉಗಲಾಟದ, ಎಸ್.ಎ. ಉಮಚಗಿ, ಸಹ ಗೌರವ ಕಾರ್ಯದರ್ಶಿ ರಾಘವೇಂದ್ರ ಎಸ್.ಕಾಲವಾಡ, ಅಶೋಕ ಎಸ್.ಸಂಕಣ್ಣವರ ಹಾಗೂ ಕೋಶಾಧ್ಯಕ್ಷ ಅರವಿಂದ ಡಿ.ಕಾಮತ ಇವರಿಗೆ ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘ ಹರಿಹರ ಪೀಠದಿಂದ ಸನ್ಮಾನಿಸಿ ಗೌರವಿಸಲಾಯಿತು.

ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಹರಿಹರ ಪೀಠದ ಜಿಲ್ಲಾಧ್ಯಕ್ಷ ವೀರಣ್ಣ ಅಂದಪ್ಪ ಕರಿಭಿಷ್ಠಿ, ರಾಜ್ಯ ಉಪಾಧ್ಯಕ್ಷ ಎಫ್.ವ್ಹಿ. ಮರಿಗೌಡ್ರ, ಗೌರವ ಅಧ್ಯಕ್ಷ ಶಿವಾನಂದ ಪಲ್ಲೇದ ಪ್ರಧಾನ ಕಾರ್ಯದರ್ಶಿಗಳಾದ ಕೆ.ಕೆ. ಮಾಳಗೌಡ್ರ, ಬಸವರಾಜ ಜಕ್ಕನವರ, ಬಸವರಾಜ ಕರಿಮುಡಿ, ಬಸವರಾಜ ವಾಲಿ, ಈರಣ್ಣ ಬಾಳಿಕಾಯಿ, ವ್ಹಿ.ಎಚ್. ದೇಸಾಯಿಗೌಡ್ರ, ಶಿವಾನಂದ ನಾಗರಾಳ ಮುಂತಾದವರಿದ್ದರು.


## ರೈತ ಮಹಿಳೆಯ ವಿರುದ್ಧ ಅವಹೇಳನಕಾರಿ ಹೇಳಿಕೆ ಪ್ರಕರಣ: ಕ್ಷಮೆಯಾಚಿಸಿದ ನಟಿ ಕಂಗನಾ ರಣಾವತ್‌ಗೆ ಜಾಮೀನು

■ವಿಜಯಸಾಕ್ಷಿ ಸುದ್ದಿ, ನವದೆಹಲಿ

2021 ರ ಮಾನನಷ್ಟ ಪ್ರಕರಣದಲ್ಲಿ ನಟಿ, ಲೋಕಸಭೆ ಸದಸ್ಯೆ ಕಂಗನಾ ರಣಾವತ್‌ಗೆ ಪಂಜಾಬ್‌ನ ಭಟಿಂಡಾ ನಗರದ ನ್ಯಾಯಾಲಯ ಸೋಮವಾರ ಜಾಮೀನು ನೀಡಿದೆ.

81 ವರ್ಷದ ಮಹಿಳೆ ಮಹಿಂದರ್ ಕೌರ್ ಸಲ್ಲಿಸಿದ್ದ ಮಾನನಷ್ಟ ಮೊಕದ್ದಮೆಯಲ್ಲಿ ಕಂಗನಾ ರನೌತ್ ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್ ಮತ್ತು ಸುಪ್ರೀಂ ಕೋರ್ಟ್‌ನಿಂದ ಪರಿಹಾರ ಪಡೆಯಲು ವಿಫಲರಾಗಿದ್ದರು.

ರೈತರ ಪ್ರತಿಭಟನೆಯ ಸಂದರ್ಭದಲ್ಲಿ ಅವಹೇಳನಕಾರಿ ಹೇಳಿಕೆ ನೀಡಿದ್ದ ಆರೋಪದ ಮೇಲೆ 81 ವರ್ಷದ ರೈತ ಮಹಿಳೆ ಮಹಿಂದರ್ ಕೌರ್ 2021 ರಲ್ಲಿ ಕಂಗನಾ ವಿರುದ್ಧ ಮಾನನಷ್ಟ ಮೊಕದ್ದಮೆ ದಾಖಲಿಸಿದ್ದರು.



ಈ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ರನೌತ್ ವರದಿಗಾರರಿಗೆ ತಪ್ಪು ತಿಳುವಳಿಕೆ ಉಂಟಾಗಿದೆ ಎಂದು ಹೇಳಿದರು, ಏನು ಚಿತ್ರಿಸಲಾಗಿದೆ ಎಂದು ನನಗೆ ಊಹಿಸಲೂ ಸಾಧ್ಯವಿಲ್ಲ ಎಂದರು.

ಲೋಕಸಭೆಯಲ್ಲಿ ಹಿಮಾಚಲ ಪ್ರದೇಶದ ಮಂಡಿ ಕ್ಷೇತ್ರವನ್ನು ಪ್ರತಿನಿಧಿಸುವ ರನೌತ್, ನ್ಯಾಯಾಲಯದಲ್ಲಿ ವೃದ್ಧ ರೈತ ಮಹಿಳೆಯ ಪತಿ ಲಾಭ್ ಸಿಂಗ್ ಅವರ ಬಳಿ ಕ್ಷಮೆಯಾಚಿಸಿದ್ದಾರೆ.

"ತಾಯಿ ಹಿಮಾಚಲ ಪ್ರದೇಶದವರಾಗಿರಲಿ ಅಥವಾ ಪಂಜಾಬ್‌ನವರಾಗಿರಲಿ, ಅವರು ನನಗೆ ಗೌರವಾನ್ವಿತರು. ಎಲ್ಲರೂ ನನ್ನನ್ನು ಪ್ರೀತಿಸುತ್ತಾರೆ" ಎಂದು ಅವರು ಹೇಳಿದರು. "ಇದು ಮರುಟ್ವೀಟ್ ಮಾಡಲಾದ ಮೀಮ್ ಆಗಿತ್ತು. ನಾನು ತಾಯಿ ಮಹಿಂದರ್ ಜಿ ಅವರ ಪತಿಯೊಂದಿಗೆ ಈ ಬಗ್ಗೆ ಮಾತನಾಡಿದ್ದೆ. ನನಗೂ ಇದಕ್ಕೂ ಯಾವುದೇ ಸಂಬಂಧವಿಲ್ಲ. ದೇಶದಲ್ಲಿ ಅನೇಕ ಚಳುವಳಿಗಳು ನಡೆಯುತ್ತಿದ್ದವು. ನಾನು ಅದರ ಬಗ್ಗೆ ಸಾಮಾನ್ಯ ಟ್ವೀಟ್ ಮಾಡಿದ್ದೆ. ಸಂಭವಿಸಿದ ತಪ್ಪು ತಿಳುವಳಿಕೆಗೆ ನಾನು ವಿಷಾದಿಸುತ್ತೇನೆ" ಎಂದು ಅವರು ಹೇಳಿದರು. ಈ ಪ್ರಕರಣದ ಮುಂದಿನ ವಿಚಾರಣೆ ನವೆಂಬರ್ 24 ರಂದು ನಡೆಯಲಿದೆ.

## ಸನ್ಮಾರ್ಗ ಕಾಲೇಜಿನ ವಿದ್ಯಾರ್ಥಿಗಳ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ (ಪದವಿ ಪೂರ್ವ) ಗದಗ, ತೋಂಟದ ಸಿದ್ದೇಶ್ವರ ವಿಜ್ಞಾನ ವಾಣಿಜ್ಯ ಹಾಗೂ ಕಲಾ ಪದವಿ ಪೂರ್ವ ಮಹಾವಿದ್ಯಾಲಯ ಗದಗ ಇವರ ಸಹಯೋಗದಲ್ಲಿ ಜರುಗಿದ ಗದಗ ಜಿಲ್ಲಾ ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟದಲ್ಲಿ ಗದುಗಿನ ಸನ್ಮಾರ್ಗ ಪ.ಪೂ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ವಿದ್ಯಾರ್ಥಿಗಳ ಉತ್ತಮ ಸಾಧನೆ ಮಾಡಿದ್ದಾರೆ.

ಖುಷಿ ವೇರ್ಣೆಕರ ಕರಾಟೆ ಸ್ಪರ್ಧೆಯಲ್ಲಿ ಪ್ರಥಮ, ಮನ್ವಿತಾ ಬಡ್ನಿ ಕರಾಟೆ ಸ್ಪರ್ಧೆಯಲ್ಲಿ ಪ್ರಥಮ, ತೆಹನಾಜ್ ಬಳ್ಳಾರಿ ಕರಾಟೆ ಸ್ಪರ್ಧೆಯಲ್ಲಿ ದ್ವಿತೀಯ, ಶಿವಯೋಗಿ ಕಮತರ ಕ್ರಾಸ್‌ಕಂಟ್ರಿ ಸ್ಪರ್ಧೆಯಲ್ಲಿ ತೃತೀಯ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.



ಸಾಧಕ ವಿದ್ಯಾರ್ಥಿಗಳನ್ನು ಮಹಾವಿದ್ಯಾಲಯದ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ನಿರ್ದೇಶಕರುಗಳಾದ ಪ್ರೊ. ರೋಹಿತ ಒಡೆಯರ್, ಪ್ರೊ. ಪುನೀತ್ ದೇಶಪಾಂಡೆ, ಪ್ರೊ. ಸೈಯದ ಮತೀನ್ ಮುಲ್ಲಾ, ಪ್ರೊ. ರಾಹುಲ್ ಒಡೆಯರ್ ಹಾಗೂ ಬೋಧಕ-ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಎಲ್ಲ ವಿಜೇತರನ್ನು ಅಭಿನಂದಿಸಿದ್ದಾರೆ.

## ಟಿಬಿ ರೋಗಿಗಳು ಭಯಪಡುವ ಅಗತ್ಯವಿಲ್ಲ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಟಿಬಿ ರೋಗಕ್ಕೆ ಸರಿಯಾದ ಚಿಕಿತ್ಸೆ ದೊರೆತರೆ ಗುಣಪಡಿಸಬಹುದಾಗಿದ್ದು, ರೋಗಿಗಳು ಭಯಪಡುವ ಅಗತ್ಯವಿಲ್ಲ. ಸರಿಯಾದ ಪೌಷ್ಟಿಕ ಆಹಾರ ಮತ್ತು ಆರು ತಿಂಗಳ ಕಾಲ ಚಿಕಿತ್ಸೆ ಪಡೆದುಕೊಂಡಲ್ಲಿ ಸಂಪೂರ್ಣ ಗುಣಮುಖರಾಗುತ್ತಾರೆ ಎಂದು ಶಾಸಕ ಡಾ. ಚಂದ್ರು ಲಮಾಣಿ ತಿಳಿಸಿದರು.

ಅವರು ಮಂಗಳವಾರ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಕ್ಷಯ ರೋಗಿಗಳಿಗೆ ಟಿಬಿ ಔಷಧಿಗಳನ್ನು ನೀಡಿ ಮಾತನಾಡಿದರು. ಕಲುಷಿತ ವಾತಾವರಣ, ನೀರು, ಆಹಾರಗಳಿಂದ ಇಂತಹ ಅನೇಕ ರೋಗಗಳು ಬರುತ್ತಿದ್ದು, ಸರಿಯಾದ ವೇಳೆಯಲ್ಲಿ ಚಿಕಿತ್ಸೆ ದೊರೆತರೆ ಅವುಗಳನ್ನು ಗುಣಪಡಿಸಬಹುದಾಗಿದೆ. ರೋಗ ಉಲ್ಬಣಗೊಂಡ ಮೇಲೆ ಚಿಕಿತ್ಸೆಗೆ ಅಲೆದಾಡುವದಕ್ಕಿಂತ ರೋಗ ಬರದಂತೆ ಮುಂಜಾಗ್ರತೆ ವಹಿಸುವದು ಹಾಗೂ ರೋಗದ ಲಕ್ಷಣಗಳು ಕಂಡುಬಂದ ತಕ್ಷಣ ಚಿಕಿತ್ಸೆ ದೊರಕಿಸಬೇಕು. ಕ್ಷಯರೋಗಕ್ಕೆ ಸರಕಾರಿ ಆಸ್ಪತ್ರೆಯಲ್ಲಿ ಉಚಿತವಾಗಿ ಸೂಕ್ತ ಚಿಕಿತ್ಸೆ, ಔಷಧಿಗಳು ದೊರೆಯುತ್ತಿದ್ದು, ಇದರ ಉಪಯೋಗ ಪಡೆದುಕೊಳ್ಳುವಂತೆ ಕರೆ ನೀಡಿದರು.




ಈ ಸಂದರ್ಭದಲ್ಲಿ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಶ್ರೀಕಾಂತ್ ಕಾಟೆವಾಲೆ, ದಂತ ವೈದ್ಯಾಧಿಕಾರಿ ಡಾಕ್ಟರ್. ಪ್ರವೀಣ ಸಜ್ಜನ್, ಆಯುಷ್ ವೈದ್ಯಾಧಿಕಾರಿಗಳಾದ ಡಾ. ಗುರುರಾಜ್ ಕುರುಡಗಿ, ಡಾ. ಶ್ವೇತಾ, ಡಾ. ಬಿಸ್ಮಿಲಾ, ತಾಲೂಕಾ ಕ್ಷಯರೋಗ ಮೇಲ್ವಿಚಾರಕ ರವಿಕುಮಾರ್ ಕೊಪ್ಪದ್, ಎಕ್ಸ್‌ರೇ ತಂತ್ರಜ್ಞ ಗಿರೀಶ್ ಗೌಡರ, ಫಾರ್ಮಸಿ ಅಧಿಕಾರಿ ಸುನಿಲ್ ಚೌಹಾಣ್, ಲ್ಯಾಬ್ ಟೆಕ್ನಿಷಿಯನ್ ತೀರ್ಥರಾಜ್ ಹಾಗೂ ಆಸ್ಪತ್ರೆಯ ಅಧಿಕಾರಿಗಳು ಹಾಜರಿದ್ದರು.

## ಕಸಾಪ ಆಡಳಿತಾಧಿಕಾರಿಯಾಗಿ ಕೆ.ಎಂ. ಗಾಯತ್ರಿ ಅಧಿಕಾರ ಸ್ವೀಕಾರ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮಹೇಶ್ ಜೋಶಿ ಆಡಳಿತಾವಧಿಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಹಣ ಹಾಗೂ ಅಧಿಕಾರ ದುರ್ಬಳಕೆ ಸೇರಿ ವಿವಿಧ ಆರೋಪಗಳ ಹಿನ್ನೆಲೆಯಲ್ಲಿ ನೂತನ ಆಡಳಿತಾಧಿಕಾರಿಯಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕಿ ಕೆ.ಎಂ. ಗಾಯತ್ರಿ ಅವರನ್ನು ನೇಮಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಆದೇಶದ ಬೆನ್ನಲ್ಲೇ ಕೆ.ಎಂ. ಗಾಯತ್ರಿ ಅವರು ಕ.ಸಾ.ಪ ಕೇಂದ್ರ ಕಚೇರಿಗೆ ತೆರಳಿ ಅಧಿಕಾರ ಸ್ವೀಕರಿಸಿದ್ದಾರೆ. ಕ.ಸಾ.ಪದಲ್ಲಿ ಹಣಕಾಸಿನ ಅವ್ಯವಹಾರ ಹಾಗೂ ಅಧಿಕಾರ ದುರ್ಬಳಕೆಯ ಆರೋಪಗಳ ವಿಚಾರಣೆಗೆ ಸಂಬಂಧಿಸಿದಂತೆ ಸಹಕಾರ ಇಲಾಖೆ ಕಳೆದ ಜುಲೈನಲ್ಲಿ ಆದೇಶ ಹೊರಡಿಸಿ ವಿಚಾರಣಾಧಿಕಾರಿಯನ್ನು ನೇಮಕ ಮಾಡಿತ್ತು. ವಿಚಾರಣೆಗೆ ಸಂಬಂಧಿಸಿದಂತೆ ಕಸಾಪದವರು ನಿಗದಿತ ಕಾಲಾವಧಿಯಲ್ಲಿ ಹಾಜರಾಗದಿರುವುದು, ಅಗತ್ಯ ದಾಖಲಾತಿಗಳನ್ನು ಒದಗಿಸದಿರುವ ಕಾರಣ ನೀಡಿ ಆಡಳಿತಾಧಿಕಾರಿ ನೇಮಿಸುವಂತೆ ಸಹಕಾರ ಇಲಾಖೆ ಸರ್ಕಾರಕ್ಕೆ ಶಿಫಾರಸು ಮಾಡಿತ್ತು.



ಶಿಫಾರಸು ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಇಂದು ಈ ಮಹತ್ವದ ನಿರ್ಧಾರ ಕೈಗೊಂಡಿದೆ. ಇದರಿಂದ ಪ್ರಸ್ತುತ ಅಧ್ಯಕ್ಷರಾಗಿದ್ದ ಮಹೇಶ್ ಜೋಶಿ ಅವರಿಗೆ ತೀವ್ರ ಹಿನ್ನಡೆಯಾದಂತಾಗಿದೆ.

ಮುಂದಿನ ಮೂರು ತಿಂಗಳವರೆಗೆ ಅಥವಾ ಕಸಾಪದ ಹಣಕಾಸಿನ ಅವ್ಯವಹಾರಕ್ಕೆ ಸಂಬಂಧಿಸಿದಂತೆ ವಿಚಾರಣೆ ಮುಗಿಯುವವರೆಗೆ ಆಡಳಿತಾಧಿಕಾರಿಯಾಗಿ ಗಾಯತ್ರಿ ಅವರು ಕಾರ್ಯನಿರ್ವಹಿಸಲಿದ್ದಾರೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

# ಭವಿಷ್ಯ ನಿರ್ಮಾಣಕ್ಕೆ ಕ್ರೀಡೆ ಸಹಕಾರಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಭದ್ರ ಭವಿಷ್ಯ ನಿರ್ಮಿಸಿಕೊಳ್ಳಲು ಕ್ರೀಡೆ ಸಹಕಾರಿಯಾಗಿದೆ ಎಂದು ದೈಹಿಕ ಶಿಕ್ಷಕ ಎಸ್.ಆರ್. ಹಿರೇಗೌಡ್ರ ಹೇಳಿದರು.

ಅವರು ಗದಗ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಜರುಗಿದ ಪ.ಪೂ ವಿಭಾಗದ ಕ್ರೀಡಾ ಕೂಟದಲ್ಲಿ ಬಹುಮಾನ ಗಳಿಸಿದ ಎಸ್‌ಜೆಜೆಎಂ ಸಂಯುಕ್ತ ಪ.ಪೂ ಮಾಹಾವಿದ್ಯಾಲಯದ ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿ, ಕ್ರೀಡೆ ಮಾನಸಿಕ ಹಾಗೂ ದೈಹಿಕ ಸಾಮರ್ಥ್ಯ ಹೆಚ್ಚಿಸುವುದರ ಜೊತೆಯಲ್ಲಿ ಭದ್ರ ಭವಿಷ್ಯ ನಿರ್ಮಾಣಕ್ಕೂ ಸಹಕಾರಿಯಾಗುವುದು ಎಂದರು.

100 ಮೀ, 200 ಮೀ, 800 ಮೀ ಅಡತಡೆ ಓಟದಲ್ಲಿ ಚೈತ್ರಾ ಗೌರಿಮನಿ ಪ್ರಥಮ ಸ್ಥಾನ, 400 ಮೀ ಓಟದಲ್ಲಿ ತಯ್ಯಾಬಾಬಿ ಮಂಟೂರ ಮುಲ್ಲಾ ಪ್ರಥಮ, 3 ಕಿ.ಮೀ ನಡಿಗೆಯಲ್ಲಿ ಕೀರ್ತಿ ಕಾಳೆ ಪ್ರಥಮ, 400 ಮೀ ರೀಲೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ ಎಂದು ಪ್ರಾಚಾರ್ಯ ಎ.ಎಂ. ಅಂಗಡಿ ಹೇಳಿದರು.

ರಸ್ತೆಯುದ್ದಕ್ಕೂ ಚಾಚಿದ ಮುಳ್ಳು ಕಂಟಿ | ವಾಹನ ಸವಾರರು ಪ್ರಾಣ ಭಯದಲ್ಲೇ ಸಂಚರಿಸುವ ಸ್ಥಿತಿ

# ಶುಲ್ಕ ಪಡೆದವರಿಗೂ ಇಲ್ಲ ಜವಾಬ್ದಾರಿ!

■ ವಿಜಯಸಾಕ್ಷಿ ಸುದ್ದಿ, ಡಂಬಳ

ಗದಗ ನಗರಕ್ಕೆ ಮತ್ತು ಮುಂಡರಗಿ ಸೇರಿ ಗ್ರಾಮೀಣ ಭಾಗಕ್ಕೆ ಸಂಪರ್ಕ ಕಲ್ಪಿಸುವ ಚಳ್ಳಿಕೇರಿ ಮುಖ್ಯ ರಸ್ತೆಯುದ್ದಕ್ಕೂ ಮುಳ್ಳು ಕಂಟಿ ಬೆಳೆದು ಕೊಂಬೆಗಳು ರಸ್ತೆಗೆ ಚಾಚಿದ್ದು, ವಾಹನ ಸವಾರರಿಗೆ ಮಾರಕವಾಗಿ ಪರಿಣಮಿಸುತ್ತಿದೆ.

ಮುಂಡರಗಿ ತಾಲೂಕು ಕೇಂದ್ರದಿಂದ ಡಂಬಳ ಹೋಬಳಿಯ ವಿವಿಧ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳ ಪೈಕಿ ಬಹುತೇಕ ಕಡೆ ಎರಡೂ ಬದಿಗೆ ಮುಳ್ಳು ಕಂಟಿಗಳು ಎತ್ತರಕ್ಕೆ ಬೆಳೆದು ರಸ್ತೆಗೆ ಚಾಚಿವೆ. ಮುಂಡರಗಿ ನಗರದಿಂದ ಬರದೂರ, ಮೇವುಂಡಿ, ಡಂಬಳ, ಜಂತ್ಲಿ ಶಿರೂರ, ಚುರ್ಚಿಹಾಳ, ಡೋಣಿ ಕ್ರಾಸ್, ಕದಾಂಪುರ, ಪಾಪನಾಶಿ, ಅಡವಿಸೋಮಾಪುರ ಮಾರ್ಗವಾಗಿ ಗದಗ ನಗರಕ್ಕೆ ಸಂಪರ್ಕ ಕಲ್ಪಿಸುವ ಚಳ್ಳಿಕೇರಿ ಮುಖ್ಯ ರಸ್ತೆ ಹೋಗುವ ರಸ್ತೆಗಳ



ಎರಡೂ ಬದಿಗೆ ಹುಲುಸಾಗಿ ಬೆಳೆದಿರುವ ಹುಲ್ಲು ಮತ್ತು ಮುಳ್ಳುಕಂಟಿಗಳಿಂದ ಪ್ರಯಾಣಿಕರು ತೊಂದರೆ ಎದುರಿಸುತ್ತಿದ್ದಾರೆ.

ಕೊರ್ಲಹಳ್ಳಿ ಭಾಗದಲ್ಲಿರುವ ಟೋಲ್ ಮತ್ತು ಕದಾಂಪುರ ಮತ್ತು ಪಾಪನಾಶಿ ಗ್ರಾಮದ ಮಧ್ಯೆ ಇರುವ ಟೋಲ್‌ಗಳ ಮಧ್ಯೆ 60 ಕಿಮಿ ಅಂತರವಿದೆ. ಆದರೆ ಈ ಭಾಗದಲ್ಲಿ ಸಂಚರಿಸುವ ವಿವಿಧ ವಾಹನಗಳು ಎರಡೂ ಕಡೆಗಳಲ್ಲಿ ಟೋಲ್ ಕಟ್ಟುತ್ತಿದ್ದಾರೆ. ಆದರೆ, ಎರಡು ವರ್ಷಗಳಿಂದ ಟೋಲ್ ನಿರ್ವಹಿಸುವವರು ಶುಲ್ಕ ಪಡೆದರೂ ರಸ್ತೆ ಸುರಕ್ಷತೆ ಕುರಿತು ವಿಚಾರ ಮಾಡುತ್ತಿಲ್ಲ. ಕೆಆರ್‌ಡಿಎಲ್ ಇಲಾಖೆಯೂ ಸಂಪೂರ್ಣ ಕಣ್ಣುಮುಚ್ಚಿಕೊಂಡು ಕುಳಿತಿರುವುದಕ್ಕೆ ಮುಳ್ಳು ಕಂಟಿಗಳೇ ಸಾಕ್ಷಿ ಹೇಳುತ್ತಿವೆ.

ಪ್ರಯಾಣಿಕರ ಸುರಕ್ಷತೆಗೆ, ಮೂಲ ಸೌಕರ್ಯಗಳಿಗೆ ಇಲ್ಲಿ ಕೇಳುವವರೇ ಇಲ್ಲದಂತಾಗಿದ್ದು, ಪುರಷರ ಶೌಚಾಲಯ ಗಬ್ಬೆದ್ದು ನಾರುವಂತಿದ್ದರೆ, ಮಹಿಳಾ ಶೌಚಾಲಯವೇ ಇಲ್ಲ. ಟೋಲ್‌ನಲ್ಲಿ ಅಳವಡಿಸಿರುವ ಕಬ್ಬಿಣದ ತಡೆಗೋಡೆಗಳು ಸಂಪೂರ್ಣ ತುಕ್ಕು ಹಿಡಿದು ಪ್ರಯಾಣಿಕರ ಜೀವ ತೆಗೆಯುವಂತಿವೆ.

ಡಂಬಳ ಮಾರ್ಗದಿಂದ ಗದಗ ನಗರಕ್ಕೆ ತೆರಳುವ ಮುಖ್ಯ ರಸ್ತೆಯುದ್ದಕ್ಕೂ ಸುರಕ್ಷತಾ ಫಲಕಗಳು ಹಾಳಾಗಿದ್ದು, ಅಪಘಾತ ವಲಯದ ಸೂಚನಾ ಫಲಕ, ಮಾರ್ಗಸೂಚಿ ಫಲಕಗಳನ್ನು ಹಾಕದೆ ಇರುವುದರಿಂದ ಅಪಘಾತಗಳು ಸಂಭವಿಸಿ ಜನರು ಪ್ರಾಣ ಕಳೆದುಕೊಳ್ಳುವಂತಾಗಿದೆ. ಡಂಬಳ ಗ್ರಾಮದಿಂದ ತೆರಳುವಾಗ ಡೋಣಿ ಕ್ರಾಸ್ ಬಳಿ ಅಳವಡಿಸಿರುವ ಲೋಹದ ತಡೆಗೋಡೆ ಸಂಪೂರ್ಣ ಹಾಳಾಗಿ ಸವಾರರು ಅಧಿಕಾರಿಗಳ ವಿರುದ್ಧ ಹಿಡಿಶಾಪ ಹಾಕುವಂತಾಗಿದೆ.

ಈ ಕುರಿತು ಜಿಲ್ಲಾಧಿಕಾರಿಗಳು, ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಸೂಕ್ತ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲು ಮುಂದಾಗಬೇಕು. ಇಲ್ಲವಾದರೆ ಉಗ್ರ ಹೋರಾಟ ಮಾಡುತ್ತೇವೆ ಎಂದು ಗ್ರಾಮಸ್ಥರು, ವಿವಿಧ ಸಂಘಟನೆಗಳು ಎಚ್ಚರಿಸಿವೆ.

> ರಸ್ತೆಯುದ್ದಕ್ಕೂ ಮುಳ್ಳು ಕಂಟಿ ಬೆಳೆದು ಚಾಚಿರುವ ಕಾರಣ ತಿರುವು ರಸ್ತೆಯಲ್ಲಿ ಎದುರಿನಿಂದ ಬರುವ ವಾಹನಗಳು ಕಾಣುತ್ತಿಲ್ಲ. ಇದರಿಂದ ಅಪಘಾತಗಳು ಸಂಭವಿಸುತ್ತಿವೆ. ರಸ್ತೆಯುದ್ದಕ್ಕೂ ಹಲವು ಅಪಘಾತ ವಲಯಗಳಿದ್ದು, ಜೀವವನ್ನು ಅಂಗೈಯಲ್ಲಿ ಹಿಡಿದೇ ವಾಹನ ಚಾಲನೆ ಮಾಡುವಂತಾಗಿದೆ.
>
> **– ಎಸ್. ಹನುಮಂತಪ್ಪ.**
> ಚಾಲಕ, ಹೂವಿನಹಡಗಲಿ.

# ಉತ್ತರ ಕರ್ನಾಟಕದ ಸೊಗಡೇ ಬೇರೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮಕನ್ನಡನಾಡಿನಸಾಂಸ್ಕೃತಿಕ ಪರಂಪರೆ ಮತ್ತು ಸಾಹಿತ್ಯದಲ್ಲಿ ಉತ್ತರ ಕರ್ನಾಟಕದ ಸೊಗಡೇ ಬೇರೆ. ಅದು ಬಹಳ ವಿಶಿಷ್ಟಮತ್ತು ವಿಬಿನ್ನ ಎಂದು ಟಿವಿ ನಿರೂಪಕ, ನಟ, ಹಾಸ್ಯ ಕಲಾವಿದ ಅಕುಲ್ ಬಾಲಾಜಿ ಅಭಿಪ್ರಾಯಪಟ್ಟರು.

ಗದುಗಿನ ಉದಯೋನ್ಮುಖ ಪ್ರತಿಭೆ ನಿಂಗು ಹುಣಸಿಮರದ್ ಇವರ 'ಫೋನ್ ಮಾಡ್ವಲ್ಲಿ' ಆಲ್ಬಮ್ ಸಾಂಗ್‌ನ್ನು ಆನ್‌ಲೈನ್ ಮೂಲಕ ವೀರ ಸಂಗೊಳ್ಳಿ ರಾಯಣ್ಣನರವೀರಭೂಮಿಯಲ್ಲಿ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಹಾಡು ತುಂಬಾ ಚೆನ್ನಾಗಿ ಮೂಡಿಬಂದಿದೆ.ಉತ್ತರಕರ್ನಾಟಕದ ಭಾಷಾ ಸೊಗಡನ್ನು ಹೊಂದಿದ್ದು, ಚಲನಚಿತ್ರಶೈಲಿಯಲ್ಲಿಚಿತ್ರೀಕರಿಸಲಾಗಿದೆ. ಉತ್ತರಕರ್ನಾಟಕದಜನತೆಗೆ ಇದು ಇಷ್ಟವಾಗುತ್ತದೆ ಎಂದರು.

ಗದುಗಿನ 'ನೀ ಕ್ರಿಯೇಷನ್' ಸಾರಥ್ಯದಲ್ಲಿನಿರ್ಮಾಣಗೊಂಡಯುವ ಕಲಾವಿದ ನಿಂಗೂ ಹುಣಸಿಮರದ ಅವರೇರಚಿಸಿ,ಹಾಡಿ,ಅಭಿನಯಿಸಿರುವ ಪ್ರಥಮ ಈ ಆಲ್ಬಮ್ ಸಾಂಗ್‌ನ್ನು ಸಂಗೊಳ್ಳಿಯಲ್ಲಿ ಬಿಡುಗಡೆ ಮಾಡುತ್ತಿರುವುದುನನಗೆಸಂತಸ ತಂದಿದೆ ಎಂದರು.

ಈ ಸಂದರ್ಭದಲ್ಲಿ ಸಂಗೀತ ಸಂಯೋಜಕವಿನೋದ್‌ಹಿರೇಮಠ, ಕಲಾಪ್ರೋತ್ಸಾಹಕರಾದವಿಜಯಕುಮಾರ ಹಿರೇಮಠ, ನಟರಂಗ ಸಂಸ್ಥೆಯ ಸಂಸ್ಥಾಪಕಸೋಮಶೇಖರಚಿಕ್ಕಮಠ, ಬಣ್ಣದಮನೆಸಾಂಸ್ಕೃತಿಕವೇದಿಕೆಯ ಸಂಸ್ಥಾಪಕ ವಿಜಯ ಕಿರೇಸೂರ, ಭರತರಾಯಬಾಗಿ,ಆಲ್ಬಮನನಟಿ ಸುಪ್ರಿಯಾ ರಾಯ್ಕರ ಸೇರಿದಂತೆ ಮುಂತಾದಕಲಾವಿದರು ಇದ್ದರು.

# ಗದಗ ಮೃಗಾಲಯದ ಅಧಿಕಾರಿಗಳು/ಸಿಬ್ಬಂದಿಗಳಿಗೆ ರೇಬಿಸ್ ಪ್ರಿ ಎಕ್ಸ್‌ಪೋಸರ್ ಪ್ರೋಫೈಲ್ಯಾಕ್ಸಿಸ್ ಲಸಿಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಣಾ ಘಟಕ, ವಲಯ ಅರಣ್ಯಾಧಿಕಾರಿಗಳ ಕಚೇರಿ, ಗದಗ ಮೃಗಾಲಯ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಹುಲಕೋಟಿ ಇವರ ಸಂಯುಕ್ತಾಶ್ರಯದಲ್ಲಿ ಗದಗ ಮೃಗಾಲಯದ ಎಲ್ಲ ಅಧಿಕಾರಿಗಳು/ಸಿಬ್ಬಂದಿಗಳಿಗೆ ರೇಬಿಸ್ ಪ್ರಿ ಎಕ್ಸ್‌ಪೋಸರ್ ಪ್ರೋಫೈಲ್ಯಾಕ್ಸಿಸ್ ಲಸಿಕೆಯನ್ನು ನೀಡಲಾಯಿತು.

ರೇಬಿಸ್ ಪ್ರಿ ಎಕ್ಸ್‌ಪೋಸರ್ ಪ್ರೋಫೈಲ್ಯಾಕ್ಸಿಸ್ ಲಸಿಕೆಯನ್ನು ಹೆಚ್ಚಿನ ಅಪಾಯದ ಗುಂಪುಗಳಾದ ವನ್ಯಜೀವಿ ವಾರ್ಡನ್‌ಗಳು, ಕ್ವಾರಂಟೈನ್ ಅಧಿಕಾರಿಗಳು, ಪಶು ವೈದ್ಯರು, ಪ್ರಾಣಿ ನಿರ್ವಾಹಕರು, ನಾಯಿ ಹಿಡಿಯುವವರು, ಸೋಂಕಿತ ವಸ್ತುಗಳನ್ನು ನಿರ್ವಹಿಸುವ ಪ್ರಯೋಗಾಲಯದ ಸಿಬ್ಬಂದಿಗಳು, ಮಾನವ ರೇಬಿಸ್ ಪ್ರಕರಣ ನೋಡಿಕೊಳ್ಳುವ ವೈದ್ಯರು, ಸಿಬ್ಬಂದಿಗಳು ಹಾಗೂ ರೇಬಿಸ್ ಎಂಡಮಿಕ್ ಪ್ರದೇಶಗಳಿಗೆ ಪ್ರಯಾಣಿಸುವ ಪ್ರಯಾಣಿಕರಿಗೆ ಮುಖ್ಯವಾಗಿ ನೀಡಬಹುದಾಗಿದೆ.

ಮೃಗಾಲಯದ ಅಧಿಕಾರಿಗಳು/ಸಿಬ್ಬಂದಿಗಳಿಗೆ ಪ್ರಾಣಿಗಳ ನಿರಂತರ ಸಂಪರ್ಕ ಇರುವುದರಿಂದ ಮುಂಜಾಗ್ರತಾ ಕ್ರಮವಾಗಿ ರೇಬಿಸ್ ಪ್ರಿ ಎಕ್ಸ್‌ಪೋಸರ್ ಪ್ರೋಫೈಲ್ಯಾಕ್ಸಿಸ್ ಲಸಿಕೆಯನ್ನು ನೀಡಲಾಯಿತು. ಲಸಿಕೆಯನ್ನು 0, 7, 21 ಅಥವಾ 28ನೇ ದಿನ 0.1ml ID (1 ಸೈಟ್) ನೀಡಬಹುದಾಗಿದೆ. ರೋಗ ನಿರೋಧಕ ಶಕ್ತಿ ಕುಂಠಿತಗೊಂಡ ವ್ಯಕ್ತಿಗಳಲ್ಲಿ ಒಂದು ಪೂರ್ತಿ ಲಸಿಕೆಯನ್ನು 0, 7, 21 ಅಥವಾ 28ನೇ ದಿನ IM (1 ಸೈಟ್) ನೀಡಬಹುದಾಗಿದೆ.

ಈ ಸಂದರ್ಭದಲ್ಲಿ ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ, ಗದಗ ಮೃಗಾಲಯದ ಅಧಿಕಾರಿ ಸಂತೋಷ ಕೆಂಚಪ್ಪನವರ, ಸ್ನೇಹಾ ಕೊಪ್ಪಳ, ಪಶು ವೈದ್ಯಾಧಿಕಾರಿ ಡಾ. ಪವಿತ್ರಾ, ಹುಲಕೋಟಿ ಪ್ರಾ.ಆ. ಕೇಂದ್ರದ ವೈದ್ಯಾಧಿಕಾರಿ ಡಾ. ಐಶ್ವರ್ಯ, ಜಿಲ್ಲಾ ಸಮೀಕ್ಷಣಾಧಿಕಾರಿಗಳ ಕಾರ್ಯಾಲಯದ ಅಧಿಕಾರಿಗಳು ಮತ್ತು ಪ್ರಾ.ಆ. ಕೇಂದ್ರ ಹುಲಕೋಟಿಯ ಆಶಾ ಕಾರ್ಯಕರ್ತೆಯರು ಹಾಜರಿದ್ದರು.

ಆಯುಷ್ಮಾನ ಆರೋಗ್ಯ ಕೇಂದ್ರದ ಸಮುದಾಯ ಆರೋಗ್ಯ ಅಧಿಕಾರಿ ರೇಖಾ ನಾಗರಹಳ್ಳಿ ಹಾಗೂ ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಣಾ ಅಧಿಕಾರಿ ಎಸ್.ಪಿ. ಕಳಸಣ್ಣವರ ಚುಚ್ಚುಮದ್ದು ನೀಡಿದರು.

ಸುಧಾರಿತ ತಾಂತ್ರಿಕತೆಗಳನ್ನು ಅಳವಡಿಸಿ, ಅಧಿಕ ಇಳುವರಿ ಪಡೆಯಿರಿ

# ರೈತ ಬಾಂಧವರಿಗೆ ಸಲಹೆ

■ ವಿಜಯಸಾಕ್ಷಿ ಸುದ್ದಿ, ಗದಗ

ಹಿಂಗಾರು ಹಂಗಾಮಿನಲ್ಲಿ ಕಡಲೆ ಬೆಳೆಯಲ್ಲಿ ಪ್ರಮುಖವಾಗಿ 10 ಜಿಲ್ಲೆಗಳು ಹೆಚ್ಚಿನ ವಿಸ್ತೀರ್ಣ ಹೊಂದಿದ್ದು, ರಾಜ್ಯದ ಸರಾಸರಿ ಇಳುವರಿ (2017–18ರಿಂದ 2021–22) 634 ಕೆ.ಜಿ/ಹೆ ಇರುತ್ತದೆ. ಇದಕ್ಕೆ ಹೋಲಿಸಿದಾಗ ಗದಗ ಜಿಲ್ಲೆಯ ಇಳುವರಿಯು 159 ಕೆ.ಜಿ./ಹೆ ಆಗಿದ್ದು, ರಾಜ್ಯದ ಸರಾಸರಿಯ ಕೇವಲ ಶೇ.25 ಮಾತ್ರ ಆಗಿರುತ್ತದೆ. ಹೆಚ್ಚಿನ ವಿಸ್ತೀರ್ಣ ಮತ್ತು ಅತಿ ಕಡಿಮೆ ಇಳುವರಿ ಇರುವದರಿಂದ ರೈತ ಬಾಂಧವರು ಜಿಲ್ಲೆಯಲ್ಲಿ ಅಧಿಕ ಇಳುವರಿಗಾಗಿ ಈ ಕೆಳಗಿನ ಸುಧಾರಿತ ತಾಂತ್ರಿಕತೆಗಳನ್ನು ಅಳವಡಿಸಿಕೊಳ್ಳಲು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುಧಾರಿತ, ರೋಗ ನಿರೋಧಕ, ಕಡಿಮೆ ಅವಧಿಯ ಹಾಗೂ ಒತ್ತಡ ಸಹಿಷ್ಣತೆ ತಳಿಯ ಬಿತ್ತನೆ ಬೀಜಗಳನ್ನು



ಉಪಯೋಗಿಸುವುದು. ಯಾಂತ್ರೀಕೃತ ಕೂರಿಗೆ ಬಿತ್ತನೆ/ಊರುಗಾಳು ಪದ್ಧತಿ ಅನ್ವಯ ಸರಿಯಾದ ಬೆಳೆ ಅಂತರ ಕಾಪಾಡುವುದು. ಬಿತ್ತನೆಯ ಸಮಯದಲ್ಲಿ ಎಕರೆಗೆ 8 ಕಿ.ಗ್ರಾಂ. ಮೈಕೋರೈಜಾ ಜೈವಿಕ ಗೊಬ್ಬರವನ್ನು 200 ಕಿ.ಗ್ರಾಂ. ಎರೆಹುಳು ಗೊಬ್ಬರದ ಜೊತೆಗೆ ಮಿಶ್ರಣ ಮಾಡಿ ಬಿತ್ತನೆಯ ಸಾಲಿನಲ್ಲಿ ಮಣ್ಣಿನಲ್ಲಿ ಹಾಕಿ ಬೆರೆಸಬೇಕು.

ದ್ವಿದಳ ಧಾನ್ಯ ಬೆಳೆ ಅವಧಿಯಲ್ಲಿ ಸೂಕ್ಷ್ಮ ಪೋಷಕಾಂಶಗಳನ್ನು ಒಳಗೊಂಡಂತೆ ಸಮಗ್ರ ಪೋಷಕಾಂಶ ನಿರ್ವಹಣೆ ಕೈಗೊಳ್ಳುವುದು. ಬೆಳೆಯಲ್ಲಿ ತೇವಾಂಶ ಕಾಪಾಡುವುದು ಮತ್ತು ಬೆಳೆಯ ಸಂದಿಗ್ಧ ಹಂತಗಳಲ್ಲಿ ನೀರು ಕೊಡಬೇಕು. ಬೇವಿನ ಬೀಜದ ಕಷಾಯ ಸಿಂಪರಣೆ, ಲಿಂಗಾಕರ್ಷಕ ಬಲೆಗಳ ಉಪಯೋಗ ಒಳಗೊಂಡಂತೆ ಸಮಗ್ರ ಪೀಡೆ ನಿರ್ವಹಣಾ ಕ್ರಮಗಳನ್ನು ಅನುಸರಿಸುವುದು.

ಬೀಜ ಮತ್ತು ರಾಸಾಯನಿಕ ಗೊಬ್ಬರಗಳನ್ನು ಏಕಕಾಲಕ್ಕೆ ಬಿತ್ತುವ ಕೂರಿಗೆಯಿಂದ 30 ಸೆಂ.ಮೀ. ಅಂತರದ ಸಾಲುಗಳಲ್ಲಿ ಬಿತ್ತನೆ ಮಾಡುವುದು ಸೂಕ್ತ. ಒಣ ಬೇಸಾಯದಲ್ಲಿ 45 ಸೆಂಮೀ ಅಂತರದ ಸಾಲುಗಳಲ್ಲಿ ಬಿತ್ತನೆ ಮಾಡಬೇಕು. ಬಿತ್ತನೆಗೆ ಮೊದಲು ಬರ ನಿರೋಧಕತೆ ಹೆಚ್ಚಿಸಲು ಬೀಜವನ್ನು ಶೇ. 2ರ ಕ್ಯಾಲ್ಸಿಯಂ ಕ್ಲೋರೈಡ್ ದ್ರಾವಣದಲ್ಲಿ 30 ನಿಮಿಷ ಅಥವಾ ಶೇ. 25ರ ಗೋಮೂತ್ರದಲ್ಲಿ 8 ಗಂಟೆಗಳ ಕಾಲ ನೆನೆಸಿ, ಕನಿಷ್ಠ 7 ಗಂಟೆ ನೆರಳಿನಲ್ಲಿ ಒಣಗಿಸಿ ಕಠಿಣಗೊಳಿಸಿ ನಂತರ ರೈಜೋಬಿಯಂ ಹಾಗೂ ರಂಜಕ ಕರಗಿಸುವ ಅಣು ಜೀವಿಯಿಂದ ಉಪಚರಿಸಬೇಕು. ಪ್ರತಿ ಕಿ.ಗ್ರಾಂ ಬೀಜಕ್ಕೆ 4 ಮಿ.ಲೀ. ಜೈವಿಕ ಗೊಬ್ಬರ, ಅಣುಜೀವಿ ಮಿಶ್ರಣವನ್ನು ಉಪಚರಿಸಿ ಬಿತ್ತನೆ ಮಾಡಿದ 30 ಮತ್ತು 45 ದಿನಗಳ ನಂತರ 1 ಲೀ. ನೀರಿನಲ್ಲಿ 40 ಮಿ.ಲೀ ಅಣುಜೀವಿ ಮಿಶ್ರಣವನ್ನು ಸಿಂಪರಿಸಬೇಕು ಎಂದು ಸಲಹೆ ನೀಡಿದೆ.

> ಬಿತ್ತನೆ ಮಾಡುವಾಗ ಶಿಲೀಂಧ್ರನಾಶಕಗಳಿಂದ ಹಾಗೂ ಜೈವಿಕ ಗೊಬ್ಬರಗಳಾದ ಟ್ರೈಕೊಡರ್ಮಾ, ಪಿ.ಎಸ್.ಬಿ ಮತ್ತು ರೈಜೋಬಿಯಂಗಳಿಂದ ಬೀಜೋಪಚಾರ ಕೈಗೊಳ್ಳಬೇಕು. ಕಡಲೆ ಬೆಳೆಯ ಬೆಳವಣಿಗೆ ಹಂತದಲ್ಲಿ (35–40 ದಿನಗಳಲ್ಲಿ) ತಪ್ಪದೇ ಕುಡಿ ಚಿವುಟುವುದು. ಸಮಗ್ರ ಪೋಷಕಾಂಶಗಳ ಬಳಕೆಯೊಂದಿಗೆ, ಸುಧಾರಿತ ಬೇಸಾಯ ಕ್ರಮಗಳ ಪ್ರಕಾರ ಸಾವಯವ ಗೊಬ್ಬರಗಳನ್ನು ಬಳಸುವುದು, ರಸಗೊಬ್ಬರಗಳನ್ನು ಬಳಸುವುದು, ನ್ಯಾನೊ ಯೂರಿಯಾ ಇತ್ಯಾದಿಗಳನ್ನು ಬಳಸಬೇಕು ಎಂದು ಸಲಹೆ ನೀಡಲಾಗಿದೆ.

# ಅಂಗನವಾಡಿ ಕೇಂದ್ರದ ಉದ್ಘಾಟನೆ

▶▶ ಮೊದಲನೇ ಪುಟದಿಂದ

ಸಚಿವರಾದ ಡಾ. ಎಚ್.ಕೆ. ಪಾಟೀಲರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ನಗರಸಭಾ ಸದಸ್ಯರು, ಗಣ್ಯರು, ಹಿರಿಯರು, ಉಪಸ್ಥಿತರಿದ್ದರು.

# ಅ.30ರಂದು ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಪ್ರತಿ ವರ್ಷದಂತೆ ಈ ವರ್ಷವೂ ನವೆಂಬರ್ 11 ರಂದು ಆಚರಿಸಲಾಗುವ ವೀರವನಿತೆ ಒನಕೆ ಓಬವ್ವ ಜಯಂತಿ ನಿಮಿತ್ತ ಅಕ್ಟೋಬರ 30 ರಂದು ಗುರುವಾರ ಬೆಳಿಗ್ಗೆ:11.30 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ.

ಸಭೆಗೆ ಆಗಮಿಸಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ಪಶ್ಚಿಮ ಪದವೀಧರರ ಮಿಂಚಿನ ನೋಂದಣಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರಗಳಿಗೆ 2026 ಚುನಾವಣೆಯ ಸಂಬಂಧಿಸಿದಂತೆ ಅಕ್ಟೋಬರ್ 29 ರಿಂದ 31ರವರೆಗೆ ಮಿಂಚಿನ ನೋಂದಣಿಯನ್ನು ಈ ಸ್ಥಳಗಳಲ್ಲಿ ಆಯೋಜಿಸಲಾಗಿದೆ.

ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ನಿಗದಿತ ದಾಖಲೆಯೊಂದಿಗೆ ನಮೂನೆ 18ನ್ನು ಈ ಕೆಳಗೆ ನಿಯೋಜಿತ ಅಧಿಕಾರಿಗಳಿಗೆ ಸಲ್ಲಿಸಬಹುದಾಗಿದೆ.

ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಚುನಾವಣಾ ತಹಸೀಲ್ದಾರ್, ಉಪವಿಭಾಗಧಿಕಾರಿಗಳ ಕಾರ್ಯಾಲಯದಲ್ಲಿ ತಹಸೀಲ್ದಾರ ಗ್ರೇಡ್2, ಗದಗ–ಬೆಟಗೇರಿ ನಗರಸಭೆಯಲ್ಲಿ ಕಂದಾಯ ಅಧಿಕಾರಿಗಳು, ಗದಗ– ಬೆಟಗೇರಿ ನಗರಸಭೆ, ವಕೀಲರ ಸಂಘದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕು ಪಂಚಾಯತ್ ಗದಗ , ಜಿಲ್ಲಾ ನೌಕರರ ಸಂಘದಲ್ಲಿ ತಹಸೀಲ್ದಾರ್ ನರಗುಂದ, ಜಿಲ್ಲೆಯ ಎಲ್ಲಾ ತಾಲೂಕುಗಳ ತಹಸೀಲ್ದಾರ್ ಕಾರ್ಯಾಲಯದಲ್ಲಿ ಜಿಲ್ಲೆಯ ಎಲ್ಲಾ ಸಹಾಯಕ ಮತದಾರರ ನೋಂದಣಿ ಅಧಿಕಾರಿಗಳು ಹಾಗೂ ನಿಯೋಜಿತ ಅಧಿಕಾರಿಗಳು ಮಿಂಚಿನ ನೋಂದಣಿ ಸ್ಥಳಗಳಲ್ಲಿ ದಾಖಲೆಗಳನ್ನು ಪರಿಶೀಲಿಸಿ ಸ್ವೀಕರಿಸುತ್ತಾರೆ.

ಪದವೀಧರರು ತಮ್ಮ ಸಾಮಾನ್ಯ ವಾಸದ ಬಗ್ಗೆ ಪ್ರಮಾಣ ಪತ್ರ ಹಾಗೂ ಪದವಿ ಬಗ್ಗೆ ದೃಢೀಕರಿಸಿದ ದಾಖಲೆಗಳನ್ನು ನೀಡಬಹುದು ಅಥವಾ ಮೂಲ ಪ್ರತಿಗಳನ್ನು ಹಾಜರುಪಡಿಸಿದ್ದಲ್ಲಿ ನಿಯೋಜಿತ ಅಧಿಕಾರಿಗಳು ಛಾಯಾಪ್ರತಿಗೆ ದೃಢೀಕರಿಸಿ ಸ್ವೀಕರಿಸುವರು ಎಂದು ಜಿಲ್ಲಾಧಿಕಾರಿಗಳು, ಜಿಲ್ಲಾ ಚುನಾವಣಾಧಿಕಾರಿಗಳಾದ ಸಿ ಎನ್ ಶ್ರೀಧರ್ ಆದೇಶಿಸಿದ್ದಾರೆ.

# ಚಿತ್ರಕಲಾ ಸ್ಪರ್ಧೆಯಲ್ಲಿ ಪ್ರಥಮ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ 'ನನ್ನ ಮತ–ನನ್ನ ಹಕ್ಕು' ವಿಷಯದಲ್ಲಿ ಈಚೆಗೆ ರೋಣದ ಬಿಆರ್‌ಸಿಯಲ್ಲಿ ರೋಣ ಮತ್ತು ಗಜೇಂದ್ರಗಡ ತಾಲೂಕಿನ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಚಿತ್ರಕಲಾ ಸ್ಪರ್ಧೆ ಜರುಗಿತು. ಇದರಲ್ಲಿ ಪಟ್ಟಣದ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಬಾಲಿಕೆಯರ ಪ್ರೌಢಶಾಲೆಯ ವಿದ್ಯಾರ್ಥಿನಿ ಶಿವಲೀಲಾ ಸೋಮಗೊಂಡ ತಾಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾಳೆ ಎಂದು ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ತಾಲೂಕಾ ಮಟ್ಟದಲ್ಲಿ ಪ್ರಥಮ ಸ್ಥಾನ ಗಳಿಸಿದ ಶಿವಲೀಲಾ ಸೋಮಗೊಂಡ ಅವರನ್ನು ಸಂಸ್ಥೆಯ ಅಧ್ಯಕ್ಷರಾದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು, ಶಾಲೆಯ ಚೇರಮನ್‌ರು, ಮುಖ್ಯೋಪಾಧ್ಯಾಯರು ಮತ್ತು ಸಿಬ್ಬಂದಿಗಳು ಅಭಿನಂದಿಸಿ ಶುಭ ಕೋರಿದ್ದಾರೆ.




ಬೆಂಗಳೂರಿನಲ್ಲಿ ನಡೆಯುವ ಕರ್ನಾಟಕ ಸ್ಟೇಟ್ ಸಾಫ್ಟ್ ಬಾಲ್ ಪ್ರೀಮಿಯರ್ ಲೀಗ್‌ನಲ್ಲಿ ಗದಗ ಜಿಲ್ಲೆಯ ತಂಡ ಗದಗ ಗ್ಲಾಡೈರ್ಸ್ ಭಾಗವಹಿಸುತ್ತಿದ್ದು, ಗದಗ ಗ್ಲಾಡೈರ್ಸ್ ತಂಡದ ಮಾಲೀಕರಾದ ಬೆಂಗಳೂರಿನ ಶ್ವೇತಾ ಗೌಡ ಹಾಗೂ ಕಾವೇರಿ ಎಫ್.ಬಡಿಗೇರ ಮುನ್ನಡೆಸಲಿದ್ದಾರೆ. ಈ ಎಲ್ಲ ಪಂದ್ಯಗಳ ನೇರ ಪ್ರಸಾರವನ್ನು ಡಿಡಿ ಸ್ಪೋರ್ಟ್ಸ್ ಮತ್ತು ವೈವ್ಸ್ ಓಟಿಟಿಯಲ್ಲಿ ವೀಕ್ಷಣೆ ಮಾಡಬಹುದಾಗಿದೆ.

# ಅವ್ವ ಸೇವಾ ಪ್ರತಿಷ್ಠಾನದಿಂದ ಫ್ಲೆಕ್ಸ್ ಅಳವಡಿಕೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆಗೆ ಅವ್ವ ಸೇವಾ ಪ್ರತಿಷ್ಠಾನ ಹಾಗೂ ಶಿಕ್ಷಕ ಹನುಮರಡ್ಡಿ ಅವರ ನೆರವಿನೊಂದಿಗೆ ಮಕ್ಕಳ ಕಲಿಕೆಗಾಗಿ ನಲಿ–ಕಲಿ ಕೊಠಡಿಗೆ ಫ್ಲೆಕ್ಸ್ ಅಳವಡಿಸಿದರು.

ಈ ಸಂದರ್ಭದಲ್ಲಿ ಶಿಕ್ಷಕ ಮಂಜುನಾಥ ಮಟ್ಟಿ ಮಾತನಾಡಿ, ಸಮಾಜ ನಮಗೆ ಎಲ್ಲವನ್ನೂ ನೀಡಿದೆ. ಇಂದು ಪ್ರತಿಯೊಬ್ಬರೂ ಶಿಕ್ಷಣವಂತರಾಗಬೇಕು ಎಂಬ ಉದ್ದೇಶದಿಂದ ಹನುಮರಡ್ಡಿ ಶಿಕ್ಷಕರು ತಳಕಲ್ಲ ಕ್ಲಸ್ಟರ್ ಮಟ್ಟದ ಪ್ರತಿಯೊಂದು ಶಾಲೆಯ ನಲಿ–ಕಲಿ




ಕೊಠಡಿಗೆ ಫ್ಲೆಕ್ಸ್ ನೀಡುವ ಮೂಲಕ ಮಕ್ಕಳ ಕಲಿಕೆಗೆ ನೆರವಾಗಿದ್ದಾರೆ. ಮಕ್ಕಳು ಶಿಕ್ಷಣವಂತರಾಗಬೇಕು, ನಾಡಿನ ಉತ್ತಮ ಪ್ರಜೆಗಳಾಗಬೇಕು ಎಂದು ಸರಕಾರ ಸಾಕಷ್ಟು ಸಹಕಾರ ನೀಡುತ್ತಿದ್ದು, ಪಾಲಕರು ಮಕ್ಕಳನ್ನು ತಪ್ಪದೇ ಶಾಲೆಗೆ ಕಳುಹಿಸಬೇಕು ಎಂದರು. ಶಿಕ್ಷಕ ಹನುಮರಡ್ಡಿ ಮಾತನಾಡಿ, ಸರಕಾರಿ ಶಾಲೆಗಳಲ್ಲಿ ನುರಿತ ಶಿಕ್ಷಕ ವೃಂದ ಇರುವುದರಿಂದ ಗುಣಮಟ್ಟದ ಶಿಕ್ಷಣ ಸಿಗುತ್ತಿದೆ. ಶಿಕ್ಷಕರು ಮಕ್ಕಳಿಗಾಗಿ ಹಗಲಿರುಳು ಶ್ರಮಿಸುತ್ತಾರೆ, ಅವರಿಗೆ ಸಹಾಯ ಸಹಕಾರ ನೀಡಿದಲ್ಲಿ ಶಾಲೆಗಳು ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಂ.ಎಂ. ಮೇಗಲಮನಿ, ಕೆ.ಎಂ. ಹೆರಕಲ್ಲ, ಮಂಜುನಾಥ ಕಲ್ಯಾಣಮಠ, ಪ್ರಭು ಕಲಿಗಾರ, ಸಂತೋಷ ಬಾತಾಖಾನಿ, ಜಿ.ಎಂ. ಗಾಡಿ, ಐ.ಐ. ಮುಜಾವಾರ, ಮಂಜುನಾಥ ಗುಲಗಂಜಿ, ಮಾಹಾಂತೇಶ ನಪೂರಿಮಠ, ಅಶೋಕ ಗಡಾದ ಸೇರಿದಂತೆ ಶಾಲಾ ಶಿಕ್ಷಕರು ಇದ್ದರು.

# ರೈತರು ಕಡ್ಡಾಯವಾಗಿ ಎಫ್‌ಐಡಿ ಮಾಡಿಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಬೆಳೆ ಹಾನಿ, ಬೆಳೆ ವಿಮೆ, ಬೆಳೆ ಸಾಲ, ಬೆಂಬಲ ಬೆಲೆಯಂತಹ ಸರಕಾರಿ ಯೋಜನೆಗಳ ಲಾಭ ಪಡೆದುಕೊಳ್ಳಲು ರೈತರು ಎಫ್‌ಐಡಿಯನ್ನು ಕಡ್ಡಾಯವಾಗಿ ಹೊಂದಿರಬೇಕು. ಅದಕ್ಕಾಗಿ ಇನ್ನೂ ಯಾವ ರೈತರು ಎಫ್‌ಐಡಿಯನ್ನು ಹೊಂದಿಲ್ಲವೋ ಅವರು ಶೀಘ್ರವೇ ಎಫ್‌ಐಡಿ ಮಾಡಿಸಿಕೊಳ್ಳಬೇಕು. ಇಲ್ಲವಾದರೆ ಸರಕಾರಿ ಸೌಲಭ್ಯಗಳಿಂದ ವಂಚಿತರಾಗಬೇಕಾಗುತ್ತದೆ ಎಂದು ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಬಸವರಾಜ ಗದಗಿನ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನರೇಗಲ್ಲ ಹೋಬಳಿಯ ಅಂದಾಜು ಶೇ. 85–90ರಷ್ಟು ರೈತರು ಈಗಾಗಲೇ ಎಫ್‌ಐಡಿ ಹೊಂದಿದ್ದಾರೆ. ಇನ್ನುಳಿದವರು ಕೂಡಲೇ ತಮ್ಮ ಎಫ್‌ಐಡಿಗಳನ್ನು ಹೊಂದಲು ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸಬೇಕೆಂದು ಬಸವರಾಜ ತಿಳಿಸಿದ್ದಾರೆ. ನೂತನವಾಗಿ ಎಫ್‌ಐಡಿಯನ್ನು ಪಡೆದುಕೊಳ್ಳುವ ರೈತರು ತಮ್ಮ ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್ ಮತ್ತು ಪಹಣಿಯೊಂದಿಗೆ ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸಬೇಕು.

2024–25ನೆ ಸಾಲಿನ ಪೂರ್ವ ಮುಂಗಾರಿನಲ್ಲಿ ಸುರಿದ ಅಕಾಲಿಕ ಮಳೆಯಿಂದ ಹಾನಿಯಾದ ಹೆಸರು ಬೆಳೆಯ ಪರಿಹಾರಕ್ಕಾಗಿ ಕೂಡ ಎಫ್‌ಐಡಿ ಅವಶ್ಯವಿದೆ. ಈವರೆಗೂ ಎಫ್‌ಐಡಿ ಹೊಂದದೆ ಇರುವ ರೈತರು ಅ. 31ರೊಳಗೆ ಎಫ್‌ಐಡಿ ನೋಂದಣಿ ಮಾಡಿಸಿಕೊಳ್ಳಬೇಕು. ಕೃಷಿ ಇಲಾಖೆಯ ಸಂಜೀವಿನಿ ವಾಹನದ ಮೂಲಕ ಎಫ್‌ಐಡಿ ಮಾಡಿಸಿಕೊಳ್ಳಬೇಕೆಂದು ರೈತರಿಗೆ ಈಗಾಗಲೆ ಜಾಗೃತಿ ಮೂಡಿಸಲಾಗಿದೆ.

ಆದಾಗ್ಯೂ ನರೇಗಲ್ಲ ಹೋಬಳಿಯಲ್ಲಿ ಇನ್ನೂ 2091 ರೈತರು ಎಫ್‌ಐಡಿ ಮಾಡಿಸಿಲ್ಲ. ಅಂಥವರು ಸರಕಾರದ ಎಲ್ಲ ಸೌಲಭ್ಯಗಳಿಂದ ವಂಚಿತರಾಗಬೇಕಾಗುತ್ತದೆ ಎಂದು ಬಸವರಾಜ ಗದಗಿನ ತಿಳಿಸಿದ್ದಾರೆ.

### 18ನೇ ಜನತಾ ದರ್ಶನದಲ್ಲಿ ಜನರ ಸಮಸ್ಯೆ ಆಲಿಸಿದ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್

# ಜನತಾ ದರ್ಶನದಲ್ಲಿ ಜನರ ಸಮಸ್ಯೆಗಳ ಇತ್ಯರ್ಥ

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**



ಜಿಲ್ಲೆಯ ಜನರ ಸಮಸ್ಯೆಗಳನ್ನು ಆಲಿಸಿ ಪರಿಹರಿಸುವ ನಿಟ್ಟಿನಲ್ಲಿ ಜನತಾ ದರ್ಶನವನ್ನು ಆಯೋಜಿಸಲಾಗುತ್ತಿದೆ. 3 ಸಾವಿರಕ್ಕೂ ಅಧಿಕ ಅರ್ಜಿಗಳನ್ನು ವಿಲೇವಾರಿ ಮಾಡುವ ಮೂಲಕ ಈಗಾಗಲೇ 17 ಜನತಾ ದರ್ಶನ ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆದಿವೆ. ಇಂದು 18ನೇ ಜನತಾ ದರ್ಶನ ನಡೆಯುತ್ತಿದೆ ಎಂದು ಕಾರ್ಮಿಕ ಇಲಾಖೆ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಹೇಳಿದರು.

ಮಂಗಳವಾರ ಕಲಘಟಗಿಯ ಬಮ್ಮಿಗಟ್ಟಿ ಕ್ರಾಸ್ ಹತ್ತಿರದ ಪಟ್ಟಣ ಪಂಚಾಯಿತಿಯ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾಡಳಿತದಿಂದ ಆಯೋಜಿಸಿದ್ದ ಜಿಲ್ಲಾ ಮಟ್ಟದ ಜನ ಸಂಪರ್ಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜನರು ಸಾಕಷ್ಟು ಸಮಸ್ಯೆಗಳನ್ನು ಜನತಾ ದರ್ಶನದಿಂದ ಪರಿಹರಿಸಿಕೊಂಡಿದ್ದಾರೆ. ಕೆಲವು ಸಮಸ್ಯೆಗಳನ್ನು ಸ್ಥಳದಲ್ಲಿಯೇ ಪರಿಹರಿಸಿದರೆ, ಇತರ ಸಮಸ್ಯೆಗಳನ್ನು ಸಂಬಂಧಪಟ್ಟ ಇಲಾಖೆಗಳು ಕಡಿಮೆ ಸಮಯದಲ್ಲೇ ಬಗೆಹರಿಸಿವೆ. ವಿಧವಾ ವೇತನ, ವೃದ್ಧಾಪ್ಯ ವೇತನ, ಜಾತಿ ಮತ್ತು ಆದಾಯ ಪ್ರಮಾಣಪತ್ರ, ಭೂಮಿ ಒತ್ತುವರಿ, ಕುಡಿಯುವ ನೀರು, ಶೌಚಾಲಯ, ವಿದ್ಯುತ್ ಸಂಪರ್ಕ, ಸಾರಿಗೆ ವ್ಯವಸ್ಥೆ ಸೇರಿದಂತೆ ಅನೇಕ ಸಮಸ್ಯೆಗಳನ್ನು ಬಗೆಹರಿಸಲು ಜನತಾ ದರ್ಶನ ಸಹಾಯಕವಾಗಿದೆ ಎಂದರು.

ಶಂಕರ ರಾಮು ಲಮಾಣಿ ಅವರು ತಮ್ಮ ಆಸ್ತಿ ಇ–ಸ್ವತ್ತು ಮಾಡಿಕೊಳ್ಳಲು ಒಂದು ವರ್ಷದಿಂದ ಅಲೆದಾಟ ಮಾಡುತ್ತಿದ್ದೇನೆ ಎಂದು ಸಚಿವರಲ್ಲಿ ಮನವಿ ಮಾಡಿದರು. ರೇಣುಕಾ ದೇವೇಂದ್ರ ಲಮಾಣಿ ಅವರು ಹೈನುಗಾರಿಕೆ ಯೋಜನೆಗೆ ಅರ್ಜಿ ಹಾಕಲಾಗಿದೆ. ಆದರೆ ಒಂದು ವರ್ಷವಾದರೂ ಸಹ ಯೋಜನೆಗೆ ಆಯ್ಕೆ ಮಾಡಿಲ್ಲ ಎಂದು ಮನವಿ ಮಾಡಿದರು. ಜಿನೂರು ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಕಳೆದ ಒಂದು ವರ್ಷದಿಂದ ಕುಡಿಯುವ ನೀರು, ವಿದ್ಯುತ್ ಹಾಗೂ ಯಾವುದೇ ಕನಿಷ್ಠ ಸೌಲಭ್ಯಗಳು ಇಲ್ಲವಾಗಿವೆ. ಅಗತ್ಯ ಸೌಲಭ್ಯಗಳನ್ನು ಕಲ್ಪಿಸಿಕೊಡುವಂತೆ ಸಚಿವರಲ್ಲಿ ಮನವಿ ಸಲ್ಲಿಸಿದರು. ಸಮಸ್ಯೆ ಕುರಿತು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಹೊರ ಗುತ್ತಿಗೆದಾರ ನೌಕರರಾಗಿ ಕೆಲಸ ಮಾಡುತ್ತಿರುವ ಪರಶುರಾಮ್ ಪಾಟೀಲ ಅವರು 3–4 ತಿಂಗಳಿಂದ ಸಂಬಳ ವಿಳಂಬವಾಗಿದೆ ಎಂದು ಸಚಿವರಲ್ಲಿ ಅಳಲು ತೋಡಿಕೊಂಡರೆ, ಮಾವಿನಕೊಪ್ಪ ಗ್ರಾಮದ ರೆಹಮಾನ ಖಾದರಸಾಬ್ ನದಾಫ್ ಅವರು ಅರಣ್ಯ ಇಲಾಖೆಯಿಂದ ಕೃಷಿ ಭೂಮಿ ಅತಿಕ್ರಮಣವಾಗಿದೆ ಎಂದು ಸಚಿವರಲ್ಲಿ ಮನವಿ ಮಾಡಿದರು. ತಕ್ಷಣ ಸಮಸ್ಯೆಗಳನ್ನು ಪರಿಹರಿಸುವಂತೆ ಅಧಿಕಾರಿಗಳಿಗೆ ಸಚಿವ ಸಂತೋಷ್ ಲಾಡ್ ಸೂಚಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಅಧ್ಯಕ್ಷರಾದ ಎಸ್. ಆರ್. ಪಾಟೀಲ, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕಿ ಪ್ರಿಯಾಂಗ್, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕಿ ವೈಷ್ಣವಿ, ಹುಬ್ಬಳ್ಳಿ–ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ವ್ಯವಸ್ಥಾಪಕ ನಿರ್ದೇಶಕ ಸಂತೋಷ ಬಿರಾದಾರ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ತಹಸೀಲ್ದಾರರು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಪ್ರಾರ್ಥಿಸಿ, ನಾಡಗೀತೆ ಪ್ರಸ್ತುತಪಡಿಸಿದರು. ಉಪ ವಿಭಾಗಾಧಿಕಾರಿ ಶಾಲಂ ಹುಸೇನ್ ಸ್ವಾಗತಿಸಿದರು.

# ಸಮರ್ಪಕ ನೀರು ಪೂರೈಕೆಗೆ ಆಗ್ರಹ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

2 ತಿಂಗಳಿಂದ ನದಿ ನೀರು ಪೂರೈಕೆಯಾಗಿಲ್ಲ ಎಂದು ಪಟ್ಟಣದ 14ನೇ ವಾರ್ಡಿನ ನಿವಾಸಿಗಳು ಮಂಗಳವಾರ ಪುರಸಭೆಗೆ ದೌಡಾಯಿಸಿ ಆಕ್ರೋಶ ವ್ಯಕ್ತಪಡಿಸಿ ಪ್ರತಿಭಟಿಸಿದರು.

ಈ ವೇಳೆ ವಾರ್ಡಿನ ಸದಸ್ಯ ಮಹೇಶ ಹುಲಬಜಾರ್, ನಿವಾಸಿಗಳಾದ ಮಲ್ಲನಗೌಡ ಪಾಟೀಲ ಮಾತನಾಡಿ, 2 ತಿಂಗಳಿಂದ ನದಿ ನೀರು ಬಿಟ್ಟಿಲ್ಲ. ಸವಳು ನೀರಿನಿಂದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿದೆ. ಸರಿಯಾಗಿ ನೀರು ಪೂರೈಕೆ ಮಾಡಬೇಕು ಎಂದು ವಾರದ ಹಿಂದೆ ವಾರ್ಡ್‌ನ ನಿವಾಸಿಗಳು ಪುರಸಭೆ ಎದುರು ಪ್ರತಿಭಟನೆ ನಡೆಸಿದ್ದರು. ಆದರೆ ಇನ್ನೂ ಪರಿಸ್ಥಿತಿ ಸುಧಾರಿಸಿಲ್ಲ. ವಾರ್ಡ್‌ನ ಜನತೆ ನೀರಿಲ್ಲದೆ ಪರಿತಪಿಸುತ್ತಿದ್ದಾರೆ. ಮುಂದಿನ ದಿನಗಳಲ್ಲಾದರೂ ಸಮಯಕ್ಕೆ ನೀರು ಬಿಡುವಂತೆ ನೋಡಿಕೊಳ್ಳಬೇಕು. ನೀರು ಪೂರೈಕೆ ಮಾಡುವ ಸಿಬ್ಬಂದಿಯೂ ಜನರೊಂದಿಗೆ ಅಗೌರವದಿಂದ ವರ್ತಿಸುತ್ತಿದ್ದು, ಬೇರೆ ಸಿಬ್ಬಂದಿಯನ್ನು ನೇಮಿಸಬೇಕು ಎಂದು ಆಗ್ರಹಿಸಿದರು.

'ನಮ್ಮ ಓಣ್ಯಾಗ ಸರಿಯಾಗಿ ನೀರ ಬಿಡಂಗಿಲ್ರೀ. ಬೇರೆ ಓಣ್ಯಾಗ 8/10 ದಿನಕೊಮ್ಮೆ ನೀರು ಬರತಾವ. ಹಿಂಗಾಗಿ ನಾವು ನೀರಿಗೆ ಅಡ್ಡಾಡಬೇಕಾಗೇತಿ' ಎಂದು ನಿಂಗವ್ವ ಪಾಟೀಲ, ಸುಜಾತ ಬಿಂಕದಕಟ್ಟಿ ಅಳಲು ತೋಡಿಕೊಂಡರು. ನೀರೆತ್ತುವ ಪಂಪ್‌ಹೌಸ್‌ನಲ್ಲಿನ ತಾಂತ್ರಿಕ ಸಮಸ್ಯೆಯ ಜತೆಗೆ ಮಾರ್ಗದಲ್ಲಿ ಪೈಪ್‌ಲೈನ್ ಒಡೆದಿದ್ದರಿಂದ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿದೆ. ಸಮಸ್ಯೆಗಳನ್ನು ಪರಿಹರಿಸಲಾಗಿದ್ದು, ನಾಳೆ ನೀರು ಬಿಡಲು ಕ್ರಮ ಕೈಗೊಳ್ಳಲಾಗುವುದು ಎಂದು ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಹೇಳಿದರು.

ಆರ್.ಎಸ್. ಹಡಗಲಿಮಠ, ಹೊಳಲಪ್ಪಗೌಡ ಪಾಟೀಲ, ಮಂಜುನಾಥ ಗಾಂಜಿ, ಸಂತೋಷ ಹೂಗಾರ, ಸೋಮನಗೌಡ ಪಾಟೀಲ, ಲೋಹಿತಗೌಡ ಪಾಟೀಲ, ಲಲಿತಾ ಈಶ್ವರಗೌಡ ಪಾಟೀಲ, ಬಸನಗೌಡ ಪಾಟೀಲ, ಮಲ್ಲವ್ವ ಪಾಟೀಲ, ಗಂಗಮ್ಮ ಫಕ್ಕೀರಸ್ವಾಮಿಮಠ, ಸಾವಕ್ಕ ಪಾಟೀಲ, ಪ್ರೇಮವ್ವ ಬಡಿಗೇರ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.



ಗದಗ–ಬೆಟಗೇರಿ ವ್ಯಾಪ್ತಿಯ ವಾರ್ಡ್ ನಂ. 35ರಲ್ಲಿ ನೀಲಮ್ಮತಾಯಿ ಮಠದ ಹತ್ತಿರ ಸಿಸಿ ರಸ್ತೆ ಕಾಮಗಾರಿಗೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಭೂಮಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ನಗರಸಭಾ ಸದಸ್ಯರು ಉಪಸ್ಥಿತರಿದ್ದರು.

# ಗದಗ–ಬೆಟಗೇರಿ; ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ–ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ದಿ:29–10–2025 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

**ಸ್ಥಳಗಳ ವಿವರ:** ವಾರ್ಡ್ ನಂ. 2 – ಸೆಟ್ಲ್ ಮೆಂಟ್, ಹನುಮಂತ ದೇವರಗುಡಿ, ಲೋಯಲಾ ಸ್ಕೂಲ್, ಗಿರಣಿ ಲೈನ್ ಲೈನ್, ವೆಲ್ಫೇರ್, ಸ್ಲಾಬ್ ಮನೆ, ಕುಷ್ಟಗಿ ಚಾಳ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 8, 9, 10 – ಬೋರೆಗಾರ ಓಣಿ, ಶಿರಹಟ್ಟಿ ಓಣಿ, ಕಬಾಡೆ ರಸ್ತೆ, ಬನಶಂಕರಿಗುಡಿ, ಹೆಲ್ತ್ ಕ್ಯಾಂಪ್, ಮಲ್ಲರಾಯನಕಟ್ಟಿ, ಪಿ ಬಿ ರಸ್ತೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 20 – ಖಾನತೋಟ ಉಳಿದ ಕೆಲವು ಭಾಗಗಳು. ವಾರ್ಡ್ 16 – ರಹಮತ್ ನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 21 – ಅಬ್ಬಿಗೇರಿ ಲೈನ್ ಉಳಿದ ಕೆಲವು ಭಾಗಗಳು.

## ಸಂತ ಕನಕದಾಸರ ಜಯಂತಿ: ಪೂರ್ವಭಾವಿ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದನ್ವಯ ಪ್ರತಿ ವರ್ಷದಂತೆ ಈ ವರ್ಷವೂ ನವೆಂಬರ್ 8 ರಂದು ಆಚರಿಸಲಾಗುವ ಸಂತ ಕನಕದಾಸರ ಜಯಂತಿ ನಿಮಿತ್ತ ಅಕ್ಟೋಬರ್ 30 ರಂದು ಗುರುವಾರ ಸಾಯಂಕಾಲ:4.00 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ಸಭೆಗೆ ಆಗಮಿಸಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾತ್ಮ ಗಾಂಧಿ, ಟಿಪ್ಪು ಸುಲ್ತಾನ್ ಸರ್ಕಲ್ ಅಭಿವೃದ್ಧಿ ಕಾಮಗಾರಿಗೆ ಸಚಿವ ಎಚ್ ಕೆ ಪಾಟೀಲ್ ಚಾಲನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ಹಾಗೂ ಟಿಪ್ಪು ಸುಲ್ತಾನ್ ಸರ್ಕಲ್ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜಾ ಸಮಾರಂಭವನ್ನು ಮಂಗಳವಾರ ರಾಜ್ಯದ ಕಾನೂನು ನ್ಯಾಯ ಹಾಗೂ ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್ ಕೆ ಪಾಟೀಲ್, ಮಹಾತ್ಮ ಗಾಂಧಿ ಸರ್ಕಲ್‌ನಲ್ಲಿ ಕಾಮಗಾರಿಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಡಿ.ವೈ.ಎಸ್.ಪಿ ಮುರ್ತುಜಾ ಖಾದ್ರಿ, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ನಗರಸಭಾ ಸದಸ್ಯರು, ಗಣ್ಯರು ಇದ್ದರು.


# ಮಾದಕ ದ್ರವ್ಯ ಪ್ರಕರಣ: ಸುಳ್ಳು ಸಾಕ್ಷ್ಯ ಸೃಷ್ಟಿಸಿದ ಮೂವರು ಪೊಲೀಸರಿಗೆ ರೂ.10 ಲಕ್ಷ ದಂಡ ಹಾಕಿದ ಮದ್ರಾಸ್ ಹೈಕೋರ್ಟ್

**■ವಿಜಯಸಾಕ್ಷಿ ಸುದ್ದಿ, ಮದ್ರಾಸ್**

ಸುಳ್ಳು ಸಾಕ್ಷ್ಯಗಳನ್ನು ಬಳಸಿಕೊಂಡು ಮಾದಕ ದ್ರವ್ಯ ಮತ್ತು ಮನೋವಿಕೃತ ವಸ್ತುಗಳ (ಎನ್‌ಡಿಪಿಎಸ್) ಕಾಯ್ದೆಯಡಿಯಲ್ಲಿ ವ್ಯಕ್ತಿಯನ್ನು ಶಿಕ್ಷೆಗೆ ಒಳಪಡಿಸಿದ್ದ ಮೂವರು ಪೊಲೀಸ್ ಅಧಿಕಾರಿಗಳಿಗೆ ಪರಿಹಾರವಾಗಿ 10 ಲಕ್ಷ ರೂ. ಪಾವತಿಸುವಂತೆ ಮದ್ರಾಸ್ ಹೈಕೋರ್ಟ್ ನಿರ್ದೇಶನ ನೀಡಿದೆ.

"ಬಂಧನದ ದಿನಾಂಕದಿಂದ ಜಾಮೀನು ಇಲ್ಲದೆ ಆ ವ್ಯಕ್ತಿ ಜೈಲಿನಲ್ಲಿದ್ದಾನೆ" ಎಂದು ನ್ಯಾಯಮೂರ್ತಿ ಕೆ.ಕೆ. ರಾಮಕೃಷ್ಣನ್ ಗಮನಿಸಿದರು.

"ಆದ್ದರಿಂದ, ಈ ಪ್ರಕರಣದಲ್ಲಿ ಮೇಲ್ಮನವಿ ಸಲ್ಲಿಸುವವರು ಪಿ.ಡಬ್ಲ್ಯೂ.2, ಪಿ.ಡಬ್ಲ್ಯೂ3 ಮತ್ತು ಪಿ.ಡಬ್ಲ್ಯೂ.4 ನಿಂದ ಸೂಕ್ತ ಪರಿಹಾರವನ್ನು ಪಡೆಯಲು ಅರ್ಹರು, ಅದನ್ನು ಅವರು ಜಂಟಿ–ಯಾಗಿ ಪಾವತಿಸಬೇಕಾದ 10 ಲಕ್ಷ ರೂ. ಎಂದು ಲೆಕ್ಕಹಾಕಲಾಗಿದೆ" ಎಂದು ನ್ಯಾಯಾಲಯ ಹೇಳಿದೆ.




ನ್ಯಾಯಯುತ ತನಿಖೆ ಮತ್ತು ವಿಚಾರಣೆಯು ಆರೋಪಿಯ ಮೂಲಭೂತ ಹಕ್ಕುಗಳಾಗಿವೆ, ಅಧಿಕಾರಿಗಳು ಯಾವಾಗಲೂ ಪ್ರಕರಣದ ನಿಜವಾದ ಸಂಗತಿಗಳನ್ನು ಪ್ರಸ್ತುತಪಡಿಸಬೇಕು ಎಂದು ನ್ಯಾಯಾಲಯ ಪುನರುಚ್ಚರಿಸಿತು.

"ನ್ಯಾಯಯುತ ತನಿಖೆ ಮತ್ತು ನ್ಯಾಯಯುತ ವಿಚಾರಣೆ ಆರೋಪಿಯ ಮೂಲಭೂತ ಹಕ್ಕು. ಹಲವಾರು ಪ್ರಕರಣಗಳಲ್ಲಿ ಗೌರವಾನ್ವಿತ ಸುಪ್ರೀಂ ಕೋರ್ಟ್ ಯಾವುದೇ ಪಕ್ಷಪಾತವಿಲ್ಲದೆ ನ್ಯಾಯಾಲಯದ ಮುಂದೆ ನಿಜವಾದ ಸಂಗತಿಗಳನ್ನು ಬಹಿರಂಗಪಡಿಸುವುದು ತನಿಖಾ ಸಂಸ್ಥೆ ಮತ್ತು ಪ್ರಾಸಿಕ್ಯೂಷನ್ ಸಂಸ್ಥೆಯ ಕರ್ತವ್ಯ ಎಂದು ಹೇಳಿದೆ" ಎಂದು ನ್ಯಾಯಾಲಯ ಹೇಳಿದೆ.

ಹೀಗಾಗಿ ನ್ಯಾಯಾಲಯವು ಅಧಿಕಾರಿಗಳ ವಿರುದ್ಧ ಸ್ವತಂತ್ರ ತನಿಖೆ ನಡೆಸುವಂತೆ ಪೊಲೀಸ್ ಮಹಾನಿರ್ದೇಶಕರಿಗೆ ನಿರ್ದೇಶಿಸಿತು. ಎನ್‌ಡಿಪಿಎಸ್ ಕಾಯ್ದೆಯ ಸೆಕ್ಷನ್ 8(ಸಿ) ಜೊತೆಗೆ ಸೆಕ್ಷನ್ 20(ಬಿ)(ಏ)(ಸಿ) ಅಡಿಯಲ್ಲಿ ತನ್ನ ಅಪರಾಧ ಸಾಬೀತು ಮತ್ತು ಶಿಕ್ಷೆಯನ್ನು ಪ್ರಶ್ನಿಸಿ ವ್ಯಕ್ತಿಯೊಬ್ಬರು ಸಲ್ಲಿಸಿದ ಮೇಲ್ಮನವಿಯನ್ನು ನ್ಯಾಯಾಲಯ ವಿಚಾರಣೆ ನಡೆಸುತ್ತಿತ್ತು.

ಜೂನ್ 26, 2021 ರಂದು, ಮಧುರೈ ನಗರದ ತಿದೀರ್‌ನಗರ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್‌ಗೆ ಅಕ್ರಮ ಗಾಂಜಾ ವ್ಯವಹಾರದ ಬಗ್ಗೆ ಮಾಹಿತಿ ಸಿಕ್ಕಿತು ಎಂಬುದು ಪ್ರಾಸಿಕ್ಯೂಷನ್ ವಾದವಾಗಿತ್ತು. ತಮ್ಮ ತಂಡದ ಸದಸ್ಯರೊಂದಿಗೆ, ಸಬ್ ಇನ್ಸ್‌ಪೆಕ್ಟರ್ ಬೆಳಿಗ್ಗೆ 11:40 ಕ್ಕೆ ಘಟನಾ ಸ್ಥಳಕ್ಕೆ ತಲುಪಿದರು, ಅಲ್ಲಿ ಆರೋಪಿಗಳು 24 ಕೆಜಿ ಗಾಂಜಾವನ್ನು ಹೊಂದಿರುವುದು ಕಂಡುಬಂದಿದೆ. ಮೊದಲ ಆರೋಪಿಯು ಮೇಲ್ಮನವಿದಾರರ ಭಾಗಿಯಾಗಿರುವ ಬಗ್ಗೆ ಒಪ್ಪಿಕೊಂಡರು ಎಂದು ಹೇಳಿದ್ದರು. ಸಹ–ಆರೋಪಿಯ ತಪ್ಪೊಪ್ಪಿಗೆಯನ್ನು ಹೊರತುಪಡಿಸಿ, ಅಪರಾಧದಲ್ಲಿ ಅವರ ಭಾಗವಹಿಸುವಿಕೆಯನ್ನು ಸಾಬೀತುಪಡಿಸಲು ಏನೂ ಇಲ್ಲ ಎಂದು ಮೇಲ್ಮನವಿ ವಾದಿಸಿದರು. ವಸೂಲಾತಿ ಮಹಾಜರ್‌ನಲ್ಲಿ ಮೇಲ್ಮನವಿದಾರರ ಸಹಿಯನ್ನು ಪಡೆಯದ ಕಾರಣ ಘಟನೆಯ ಸ್ಥಳದಲ್ಲಿ ಅವರ ಉಪಸ್ಥಿತಿಯು ಅನುಮಾನಾಸ್ಪದವಾಗಿದೆ ಎಂದು ವಾದಿಸಲಾಯಿತು.

# ಕಳ್ಳ ಅಂತ ಬೆನ್ನಟ್ಟಿದ ಸ್ಥಳೀಯರು: ರಾತ್ರೋರಾತ್ರಿ ತೆಂಗಿನ ಮರ ಏರಿ ಯುವಕನ ಹೈಡ್ರಾಮಾ!

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವಿವೇಕಾನಂದ ನಗರ ಬಡಾವಣೆಯಲ್ಲಿ ರಾತ್ರಿ ವೇಳೆ ತೆಂಗಿನ ಮರ ಏರಿ ಯುವಕ ಹೈಡ್ರಾಮಾ ಸೃಷ್ಟಿಸಿದ ಘಟನೆ ಜರುಗಿದೆ.

ಬೆಳಗಾವಿ ಜಿಲ್ಲೆಯ ಗಬ್ಬೂರು ಗ್ರಾಮದ ನಿವಾಸಿ ಬಸವರಾಜ್ ಸೊಲ್ಲಾಪುರ ಎಂಬಾತ, ಕಳ್ಳನೆಂದು ಸ್ಥಳೀಯರು ಬೆನ್ನಟ್ಟುತ್ತಿದ್ದಾಗ ಭಯಗೊಂಡು ತೆಂಗಿನ ಮರಕ್ಕೆ ಏರಿ ಕುಳಿತಿದ್ದಾನೆ.

ಮಂಗಳವಾರ ಬೆಳಿಗ್ಗೆ 4 ಗಂಟೆಯ ವೇಳೆಗೆ ನಡೆದ ಈ ಘಟನೆ ಎರಡು ಗಂಟೆಗಳ ಕಾಲ ಮುಂದುವರಿಯಿತು. ಕೆಳಗೆ ಇಳಿಯಲಾಗದೆ ಪರದಾಡುತ್ತಿದ್ದ ಬಸವರಾಜ್‌ನ್ನು ಅಗ್ನಿಶಾಮಕ ದಳದ ಸಿಬ್ಬಂದಿಗಳು ಸ್ಥಳಕ್ಕೆ ಬಂದು ರಕ್ಷಣಾ ಕಾರ್ಯಾಚರಣೆ ನಡೆಸಿ ಸುರಕ್ಷಿತವಾಗಿ ಕೆಳಗೆ ಇಳಿಸಿದರು.



ನಂತರ ಅಗ್ನಿಶಾಮಕ ದಳದ ಸಿಬ್ಬಂದಿಗಳು ಆತನನ್ನು ಬೆಟಗೇರಿ ಬಡಾವಣೆ ಪೊಲೀಸರಿಗೆ ಒಪ್ಪಿಸಿದರು. ಬಸವರಾಜ್‌ನ ಹಿನ್ನಲೆ ಹಾಗೂ ಘಟನೆಯ ನಿಖರ ಕಾರಣ ಕುರಿತು ಪೊಲೀಸರು ತನಿಖೆ ಆರಂಭಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka